ಸಂಪುಟ : 10 ಸಂಚಿಕೆ: 138 ಪುಟ : 4+2 ಬೆಲೆ: 3.00 ಶುಕ್ರವಾರ ಜುಲೈ 04 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 10 Issue : 138 Pages : 4+2 Price : 3.00 Friday July 04 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25




### ಸರಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಸ್ಥಾನಕ್ಕೆ ನಡೆದ ಚುನಾವಣೆ | ಡಾ. ಬಸವರಾಜ ಬಳ್ಳಾರಿಗೆ 68ಕ್ಕೆ 55 ಮತ

# ಬಸವರಾಜ ಸರಕಾರಿ ನೌಕರರ 'ರಾಜ'





■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ಗದಗ ಜಿಲ್ಲಾ ಘಟಕದಲ್ಲಿ ಡಾ. ರವಿ ಗುಂಜೀಕರ್ ಅವರ ಸೇವಾ ನಿವೃತ್ತಿಯಿಂದ ತೆರವಾದ ಅಧ್ಯಕ್ಷ ಸ್ಥಾನಕ್ಕೆ ಗುರುವಾರ ನಡೆದ ಚುನಾವಣೆಯಲ್ಲಿ ಡಾ. ಬಸವರಾಜ ಬಳ್ಳಾರಿ ಅಭೂತಪೂರ್ವ ಗೆಲುವು ಸಾಧಿಸಿದ್ದಾರೆ. ಈ ಹಿಂದೆ ಡಾ. ಬಸವರಾಜ ಬಳ್ಳಾರಿ ಅವರನ್ನು ಹಂಗಾಮಿ ಅಧ್ಯಕ್ಷರನ್ನಾಗಿ ನೇಮಕ ಮಾಡಲಾಗಿತ್ತು. ಪೂರ್ಣಾವಧಿಗೂ ಬಸವರಾಜ ಬಳ್ಳಾರಿ ಅವರನ್ನು ಅಧ್ಯಕ್ಷರನ್ನಾಗಿ ಘೋಷಣೆ ಮಾಡಲು ಕೆಲವರು ವಿರೋಧ ವ್ಯಕ್ತಪಡಿಸಿದ್ದ ಹಿನ್ನೆಲೆಯಲ್ಲಿ ಗುರುವಾರ ಚುನಾವಣೆ ನಿಗದಿಯಾಗಿತ್ತು. ಅಧಿಸೂಚನೆಯಂತೆ ನೌಕರರ ಭವನದಲ್ಲಿ ಗುರುವಾರ ಚುನಾವಣೆ ಪ್ರಕ್ರಿಯೆಗಳು ಪ್ರಾರಂಭವಾದವು. ಡಾ. ಬಸವರಾಜ ಬಳ್ಳಾರಿ ಹಾಗೂ ಮುಂಡರಗಿ ತಾಲೂಕು



ಘಟಕದ ಅಧ್ಯಕ್ಷ ನಾಗರಾಜ ಹಳ್ಳಿಕೇರಿ ನಾಮಪತ್ರ ಸಲ್ಲಿಸಿದರು. ಮತದಾನ ಹಕ್ಕು ಹೊಂದಿದ್ದ 69 ಜನ ಸದಸ್ಯರ ಪೈಕಿ 68 ಜನ ಮತ ಚಲಾಯಿಸಿದರು. ಆ ಪೈಕಿ 55 ಮತಗಳನ್ನು ಪಡೆದು ಬಸವರಾಜ ಬಳ್ಳಾರಿ ಅಧ್ಯಕ್ಷರಾಗಿ ಆಯ್ಕೆಯಾದರೆ, 13 ಮತಗಳನ್ನು ಪಡೆದ ನಾಗರಾಜ ಹಳ್ಳಿಕೇರಿ ಪರಾಭವಗೊಂಡರು.

ಈ ಕುರಿತು ಚುನಾವಣಾಧಿಕಾರಿ ಸಿ. ಬಸವರಾಜ ಅಧಿಕೃತವಾಗಿ ಘೋಷಣೆ ಮಾಡಿ, ಬಸವರಾಜ ಬಳ್ಳಾರಿ ಅವರಿಗೆ ಪ್ರಮಾಣಪತ್ರ ವಿತರಣೆ ಮಾಡಿದರು.

ಸೇವಾ ನಿವೃತ್ತಿ ಹೊಂದಿರುವ ಡಾ. ರವಿ ಗುಂಜೀಕರ್ ಮೂರು ಅವಧಿಗೂ ಅವಿರೋಧವಾಗಿ ಸರಕಾರಿ ನೌಕರರ ಸಂಘದ ಅಧ್ಯಕ್ಷರಾಗಿ ಆಯ್ಕೆಯಾಗಿದ್ದರು. ಇದೇ ಮೊದಲ ಬಾರಿಗೆ ಅಧ್ಯಕ್ಷರ ಹುದ್ದೆಗೆ ಚುನಾವಣೆ ನಿಗದಿಯಾಗಿದ್ದರಿಂದ ಭಾರೀ ಕುತೂಹಲ ಮೂಡಿಸಿತ್ತು. ಬಸವರಾಜ ಬಳ್ಳಾರಿ ಆಯ್ಕೆ ಘೋಷಣೆಯಾಗುತ್ತಿದ್ದಂತೆ ಡಾ. ರವಿ ಗುಂಜೀಕರ್ ಹಾಗೂ ಅವರ ಅಪಾರ ಅಭಿಮಾನಿಗಳು ಪಟಾಕಿ ಸಿಡಿಸಿ, ಸಿಹಿ ವಿತರಿಸಿ, ಪರಸ್ಪರ ಬಣ್ಣ ಎರಚಿ ಸಂಭ್ರಮಿಸಿದರು.

> ಈ ಅಭೂತಪೂರ್ವ ಗೆಲುವಿಗೆ ಜಿಲ್ಲೆಯ ಎಲ್ಲ ಸರಕಾರಿ ನೌಕರರು ಮತ್ತು ನೌಕರರ ಸಂಘದ ಪದಾಧಿಕಾರಿಗಳು ಕಾರಣರಾಗಿದ್ದಾರೆ. ಜಿಲ್ಲಾಧ್ಯಕ್ಷ ಸ್ಥಾನದ ಈ ಜವಾಬ್ದಾರಿಯನ್ನು ಸಮರ್ಥವಾಗಿ ಬಳಸಿಕೊಂಡು, ಎಲ್ಲರನ್ನೂ ಒಗ್ಗೂಡಿಸಿಕೊಂಡು ಸರಕಾರಿ ನೌಕರರ ಸಮಸ್ಯೆಗಳಿಗೆ ಸ್ಪಂದಿಸುವ ಕೆಲಸ ಮಾಡುವೆ.
>
> **– ಡಾ. ಬಸವರಾಜ ಬಳ್ಳಾರಿ.**
> ನೌಕರರ ಸಂಘದ ನೂತನ ಜಿಲ್ಲಾಧ್ಯಕ್ಷರು.



ನೌಕರರ ಭವನದ ಮುಂದಿನ ಆವರಣದಲ್ಲಿ ವಿಜಯೋತ್ಸವ
ಪಂ. ಪುಟ್ಟರಾಜರ ದೇವಸ್ಥಾನದ ಆಚರಿಸಿದರು.

## ರಕ್ತದಾನ ಶಿಬಿರ ಇಂದು

■ವಿಜಯಸಾಕ್ಷಿ ಸುದ್ದಿ, ರೋಣ

ಮಾರನಬಸರಿ ಗ್ರಾಮದಲ್ಲಿ ಜರುಗುವ ಮೊಹರಂ ಮತ್ತು ಸ್ವಾಮಿ ವಿವೇಕಾನಂದರ ಪುಣ್ಯ ಸ್ಮರಣೆ ಅಂಗವಾಗಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕೆ.ಎಚ್. ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಗದಗ ಹಾಗೂ ಗ್ರಾಮ ಪಂಚಾಯಿತಿ ಮಾರನಬಸರಿ ಇವರುಗಳ ಸಂಯುಕ್ತ ಆಶ್ರಯದಲ್ಲಿ ಜುಲೈ 4ರಂದು ಬೆಳಿಗ್ಗೆ 10 ಗಂಟೆಗೆ ರಕ್ತದಾನ ಶಿಬಿರ ನಡೆಯಲಿದೆ.

ಆಸಕ್ತರು ಶಿಬಿರದಲ್ಲಿ ಭಾಗಿಯಾಗಿ ರಕ್ತದಾನ ಮಾಡಬೇಕು ಎಂದು ಆಯೋಜಕರು ಪ್ರಕಟನೆಯಲ್ಲಿ ತಿಳಿಸಿದ್ದಾರೆ.

## ಸಾರ್ವಜನಿಕರ ಗಮನಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಪೊಲೀಸ್ ಇಲಾಖೆಯಿಂದ ಗದಗ ತಾಲೂಕು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಕುಂದು ಕೊರತೆಗಳ ಸಭೆಯನ್ನು ತಾಲೂಕು ಮಟ್ಟದ ಎಲ್ಲಾ ಅಧಿಕಾರಿಗಳ ಸಹಯೋಗದೊಂದಿಗೆ ಜುಲೈ 4 ರಂದು ಮುಂಜಾನೆ 11.00 ಗಂಟೆಗೆ ಪೊಲೀಸ್ ಭವನ ಆಯೋಜಿಸಲಾಗಿದ್ದ ಸಭೆ ಕಾರಣಾಂತರಗಳಿಂದ ಮಧ್ಯಾಹ್ನ 3.00 ಗಂಟೆಗೆ ಜರುಗಲಿದೆ.

ಗದಗ ತಾಲೂಕು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಮುಖಂಡರು ಸಭೆಗೆ ಹಾಜರಾಗಲು ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರು ಕೋರಿರುತ್ತಾರೆ.

### ನಗರದ ಹೊಸ ಬಸ್ ನಿಲ್ದಾಣವನ್ನು ವೀಕ್ಷಿಸಿದ ಬಿ.ಬಿ. ಅಸೂಟಿ ಸೂಚನೆ

# ನಿಲ್ದಾಣದ ಸ್ವಚ್ಛತೆಗೆ ಆದ್ಯತೆ ನೀಡಿ

■ವಿಜಯಸಾಕ್ಷಿ ಸುದ್ದಿ, ಗದಗ

ಹೊಸ ಬಸ್ ನಿಲ್ದಾಣದ ಸ್ವಚ್ಛತೆಗೆ ಅಧಿಕಾರಿಗಳು ಆದ್ಯತೆ ನೀಡಿ ಸಾರ್ವಜನಿಕರ ಆರೋಗ್ಯವನ್ನು ಕಾಪಾಡುವ ಉತ್ತಮ ವಾತವರಣ ಕಲ್ಪಿಸಬೇಕು ಎಂದು ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷ ಬಿ.ಬಿ. ಅಸೂಟಿ ಹೇಳಿದರು.

ನಗರದ ಹೊಸ ಬಸ್ ನಿಲ್ದಾಣದಲ್ಲಿ ಜುಲೈ 2ರಿಂದ 4ರವರೆಗೆ ಹಮ್ಮಿಕೊಂಡಿರುವ ಕರ್ನಾಟಕ ಸರ್ಕಾರದ 2 ವರ್ಷಗಳ ಸಾಧನೆ ಬಿಂಬಿಸುವ ವಸ್ತು ಪ್ರದರ್ಶನವನ್ನು ಉದ್ಘಾಟಿಸಿದ ನಂತರ ಬಸ್ ನಿಲ್ದಾಣವನ್ನು ವೀಕ್ಷಿಸಿ ಅವರು ಮಾತನಾಡಿದರು.

ಶಕ್ತಿ ಯೋಜನೆಯಿಂದ ದಿನಕ್ಕೆ ಸಾವಿರಾರು ಮಹಿಳೆಯರು ಉಚಿತ ಪ್ರಯಾಣ ಮಾಡುವಂತಾಗಿದೆ. ಹಾಗಾಗಿ ಬಸ್ ನಿಲ್ದಾಣದಲ್ಲಿರುವ ಶೌಚಾಲಯಗಳು, ಅದಕ್ಕೆ ಅಳವಡಿಸಿರುವ ನಳಗಳು ಸುಸಿತ್ಥಿಯಲ್ಲಿ ಕಾರ್ಯನಿರ್ವಹಿಸುವಂತೆ ಅಧಿಕಾರಿಗಳು ಗಮನಹರಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಸಾರ್ವಜನಿಕರು ಕೂರುವ ಆಸನಗಳು ಹಾಳಾಗಿದ್ದು, ಸಾರ್ವಜನಿಕರಿಗೆ ಸೂಕ್ತ ಆಸನ ವ್ಯವಸ್ಥೆಯನ್ನು ಕಲ್ಪಿಸಬೇಕು. ಬಸ್ ನಿಲ್ದಾಣದ ಒಳಗಡೆ ಇರುವ ಅಂಗಡಿಗಳ ತ್ಯಾಜ್ಯವನ್ನು



ಸರಿಯಾಗಿ ವಿಲೇವಾರಿ ಮಾಡುವಂತೆ ಕ್ರಮ ವಹಿಸಬೇಕು. ಇಲ್ಲದಿದ್ದಲ್ಲಿ ಅಂಗಡಿಯವರಿಗೆ ನೋಟಿಸ್ ನೀಡಬೇಕು. ಅಂದಾಗ ಮಾತ್ರ ಬಸ್ ನಿಲ್ದಾಣದಲ್ಲಿ ಪ್ಲಾಸ್ಟಿಕ್ ತ್ಯಾಜ್ಯ ಕಡಿಮೆ ಆಗುತ್ತದೆ ಎಂದು ಹೇಳಿದರು.

ಈ ವೇಳೆ ಬಸ್ ನಿಲ್ದಾಣದಲ್ಲಿ ಕುಳಿತ ಮಹಿಳೆಯರೊಂದಿಗೆ ಮಾತನಾಡಿದ ಅವರು, ಗ್ಯಾರಂಟಿ ಯೋಜನೆಗಳ ಕುರಿತು ಅಭಿಪ್ರಾಯ ಕೇಳಿದರು. ಇದಕ್ಕೆ ಪ್ರತಿಕ್ರಿಯಿಸಿದ ಮಹಿಳೆಯರು, ಶಕ್ತಿ ಯೋಜನೆಯಿಂದ ಉಚಿತವಾಗಿ ಸ್ವಾವಲಂಬನೆಯೊಂದಿಗೆ ಬಸ್‌ನಲ್ಲಿ ಓಡಾಡಲು ಅನುಕೂಲವಾಗಿದೆ ಎಂದು ಸಂತಸ ವ್ಯಕ್ತಪಡಿಸಿದರು.

> ಶಕ್ತಿ ಯೋಜನೆಯಿಂದಾಗಿ ಪ್ರತಿದಿನ ಸಾವಿರಾರು ಮಹಿಳೆಯರು ಸ್ವಾವಲಂಬನೆಯಿಂದ ಓಡಾಟ ನಡೆಸುತ್ತಿದ್ದಾರೆ. ಹಾಗಾಗಿ ಬಸ್ ನಿಲ್ದಾಣದಲ್ಲಿರುವ ಶೌಚಾಲಯಗಳು ಸುವ್ಯವಸ್ಥಿತವಾಗಿ ಕಾರ್ಯನಿರ್ವಹಿಸುವಂತೆ ಅಧಿಕಾರಿಗಳು ಗಮನ ಹರಿಸಬೇಕು. ಬಸ್ ನಿಲ್ದಾಣದಲ್ಲಿರುವ ಆಸನ ವ್ಯವಸ್ಥೆಯನ್ನು ಸರಿಪಡಿಸಬೇಕು ಹಾಗೂ ಪ್ಲಾಸ್ಟಿಕ್ ಮುಕ್ತ ಬಸ್ ನಿಲ್ದಾಣ ಮಾಡಬೇಕು.
>
> **– ಕೃಷ್ಣಗೌಡ ಎಚ್.ಪಾಟೀಲ.**
> ಗ್ಯಾರಂಟಿ ಪ್ರಾಧಿಕಾರದ ಸದಸ್ಯರು.

ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರ್‌ಸಾಬ್ ಬಬರ್ಚಿ, ಗದಗ ತಾಲೂಕು ಪಂಚ ಗ್ಯಾರಂಟಿ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ, ನೀಲಮ್ಮ ಬೋಳಣ್ಣನವರ, ಬಸವರಾಜ ಕಡೇಮನಿ, ಶಂಭು ಕಾಳೆ, ಸಂಗಮೇಶ ಕೆರಕಲಮಟ್ಟಿ, ಸಾವಿತ್ರಿ ಹೂಗಾರ, ದೇವರಡ್ಡಿ ತಿರ್ಲಾಪುರ, ಗಣೇಶ ಮಟ್ಟಾಲಿ, ಸಂಗಮೇಶ ಹಾದಿಮನಿ, ವಾರ್ತಾಧಿಕಾರಿ ವಸಂತ ಮಡ್ಲೂರ, ಮಹಿಳಾ ಮತ್ತು ಮಕ್ಕಳ ನಿರೂಪಣಾಧಿಕಾರಿ ರಾಧಾ ಮಣ್ಣೂರು, ಹುಲಿಗೆಮ್ಮ ಜೋಗೆರ ಹಾಜರಿದ್ದರು.

## ವಚನ ಸಾಹಿತ್ಯಕ್ಕೆ ಮರುಜೀವ ಕೊಟ್ಟವರು ಫ.ಗು. ಹಳಕಟ್ಟಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕಣ್ಮರೆಯಾಗಿ ಹೋಗುವ ವಚನ ಸಾಹಿತ್ಯಕ್ಕೆ ಮರುಜೀವನ ಕೊಟ್ಟು ಕನ್ನಡ ಸಾಹಿತ್ಯದ ಅಮೂಲ್ಯ ಆಸ್ತಿಯನ್ನು ಉಳಿಸಿದ ಮಹಾನ್ ಪುರುಷ ಫ.ಗು. ಹಳಕಟ್ಟಿ ಎಂದರೆ ತಪ್ಪಾಗಲಾರದು ಎಂದು ಶಿಕ್ಷಕ ಜೆ.ಎಸ್. ರಾಮಶೆಟ್ಟರ ಹೇಳಿದರು.

ಬುಧವಾರ ಸಮೀಪದ ಶಿಗ್ಲಿ ಗ್ರಾಮದ ಗ್ರಾಮಾಂತರ ಶಿಕ್ಷಣ ಸಂಸ್ಥೆಯಲ್ಲಿ ಶರಣ ಸಾಹಿತ್ಯ ಪರಿಷತ್ತು, ಕದಳಿ ಮಹಿಲಾ ವೇದಿಕೆ ಇವುಗಳ ಆಶ್ರಯದಲ್ಲಿ ವಚನ ಪಿತಾಮಹ ಫ.ಗು. ಹಳಕಟ್ಟಿ ಅವರ ಜನ್ಮ ದಿನಾಚರಣೆ ಅಂಗವಾಗಿ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಅವರು ಮಾತನಾಡಿದರು.

12ನೇ ಶತಮಾನದಲ್ಲಿ ಬಸವಾದಿ ಶರಣರು ಸಾವಿರಾರು ವಚನಗಳನ್ನು ರಚನೆ ಮಾಡಿ ಕನ್ನಡ ಸಾಹಿತ್ಯವನ್ನು ಶ್ರೀಮಂತಗೊಳಿಸಿದ್ದರು. ಕನ್ನಡ ಸಾಹಿತ್ಯದ ಅಮೂಲ್ಯ ರತ್ನಗಳಂತಿದ್ದ ವಚನ ಸಾಹಿತ್ಯವು ಶರಣರ ಕಾಲಾನಂತರದಲ್ಲಿ ಅಲ್ಲಲ್ಲಿ ಕಣ್ಮರೆಯಾಗಿ ಹೋಗುತ್ತಿದ್ದವು. ಓಲೆ ಗರಿಯಲ್ಲಿದ್ದ ವಚನ ಸಾಹಿತ್ಯವನ್ನು ರಕ್ಷಣೆ ಮಾಡಿ ಅವುಗಳಿಗೆ ಜೀವ ತುಂಬಿ ಕನ್ನಡ ಸಾಹಿತ್ಯಕ್ಕೆ ಅಮೋಘ ಕಾಣಿಕೆ ನೀಡಿದ್ದು ಫ.ಗು. ಹಳಕಟ್ಟಿಯವರು. ಹಳಕಟ್ಟಿಯವರು ವಚನ ಸಾಹಿತ್ಯದ ರಕ್ಷಣೆ ಹಾಗೂ ಅವುಗಳ ಪ್ರಸಾರಕ್ಕೆ ತಮ್ಮ ಜೀವನವನ್ನೇ ಮುಡಿಪಾಗಿಟ್ಟವರು ಎಂದರು.

ಸಮಾರಂಭ ಉದ್ಘಾಟಿಸಿದ ಬಸಣ್ಣ ಬೆಂಡಿಗೇರಿ ಮಾತನಾಡಿ, ಶರಣರ ವಚನಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳುವುದು ಅಗತ್ಯವಾಗಿದೆ. 12ನೇ ಶತಮಾನದಲ್ಲಿ ರಚಿಸಿದ ವಚನಗಳು ಸಮಾಜದ ಅಂಕು-ಡೊಂಕು ತಿದ್ದುವ ಸಾಹಿತ್ಯವಾಗಿದೆ. ಇಂತಹ ಶರಣರ ವಚನಗಳನ್ನು ಸಂರಕ್ಷಣೆ ಮಾಡಿದ ಕೀರ್ತಿ ಫ.ಗು. ಹಳಕಟ್ಟಿ ಅವರಿಗೆ ಸಲ್ಲುತ್ತದೆ ಎಂದು ಹೇಳಿದರು.

ಈ ವೇಳೆ ರಂಜನ ಪಾಟೀಲ, ಸೋಮಣ್ಣ ಡಾಣಗಲ್ಲ, ರಾಜರತ್ನ ಹುಲಗೂರ, ನಿರ್ಮಲಾ ಅರಳಿ, ಎಲ್.ಎಸ್. ಅರಳಹಳ್ಳಿ ಇದ್ದರು. ಮಾಲಾದೇವಿ ದಂದರಗಿ ಸ್ವಾಗತಿಸಿ ಕಾರ್ಯಕ್ರಮ ನಿರ್ವಹಿಸಿದರು. ಎಂ.ಕೆ. ಕಳ್ಳಿಮಠ ವಂದಿಸಿದರು.

### ಆಗಸ್ಟ್ 3 ರಂದು ಕುರುಬ ಸಮಾಜದ ರಾಜ್ಯಮಟ್ಟದ ವಧು-ವರರ ಸಮಾವೇಶ: ರುದ್ರಣ್ಣ ಗುಳಗುಳಿ ಮಾಹಿತಿ

# ಒಂದೇ ವೇದಿಕೆಯಲ್ಲಿ ಹಲವಾರು ಆಯ್ಕೆಗೆ ಅವಕಾಶ

■ವಿಜಯಸಾಕ್ಷಿ ಸುದ್ದಿ, ಗದಗ

ಹಾಲುಮತ ಮಹಾಸಭಾ ಜಿಲ್ಲಾ ಘಟಕ ಹಾಗೂ ಪ್ರದೇಶ ಕುರುಬರ ಸಂಘ ಜಿಲ್ಲಾ ಘಟಕದ ಸಹಯೋಗದಲ್ಲಿ ಆಗಸ್ಟ್ 3ರಂದು ಬೆಳಿಗ್ಗೆ 10 ಗಂಟೆಗೆ ನಗರದ ಮುಳಗುಂದ ರಸ್ತೆಯಲ್ಲಿರುವ ಶ್ರೀ ಕನಕ ಭವನದಲ್ಲಿ ಹಾಲುಮತ (ಕುರುಬ) ಸಮಾಜದ 7ನೇ ರಾಜ್ಯಮಟ್ಟದ ವಧು-ವರರ ಸಮಾವೇಶ ಹಮ್ಮಿಕೊಳ್ಳಲಾಗಿದೆ ಎಂದು ಹಾಲುಮತ ಮಹಾಸಭಾದ ರಾಜ್ಯಾಧ್ಯಕ್ಷ ರುದ್ರಣ್ಣ ಗುಳಗುಳಿ ಹೇಳಿದರು.

ನಗರದ ಪತ್ರಿಕಾಭವನದಲ್ಲಿ ಗುರುವಾರ ಜರುಗಿದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿ, ಈ ಸಮಾವೇಶದಲ್ಲಿ ರಾಜ್ಯದ ಎಲ್ಲಾ ಜಿಲ್ಲೆಗಳಿಂದಲೂ ಹಾಗೂ ಗದಗ ಜಿಲ್ಲೆಯ ಸುತ್ತಮುತ್ತಲಿನ ಪ್ರದೇಶಗಳಿಂದ ಸುಮಾರು 250ಕ್ಕೂ ಹೆಚ್ಚು ವಧು-ವರರು ಆಗಮಿಸಲಿದ್ದಾರೆ. ಈ ಸಮಾವೇಶದಲ್ಲಿ




ವಧು-ವರರಿಗೆ ಹಾಲುಮತದ ಸಂಪ್ರದಾಯದಂತೆ ಉಡಿತುಂಬಿ ಪರಿಚಯಿಸಲಾಗುವದು. ಇದೇ ಸಂದರ್ಭದಲ್ಲಿ ಸಮಾಜದ ಐವರು ಹಿರಿಯರಿಗೆ ಜೀವಮಾನ ಸಾಧನೆಗಾಗಿ ಸನ್ಮಾನಿಸಲಾಗುವುದು ಎಂದು ಹೇಳಿದರು.

ಈ ಸಮಾವೇಶದಲ್ಲಿ ಬೇರೆ ಬೇರೆ ಊರುಗಳಿಂದ ವಧು-ವರರು ಆಗಮಿಸುವದರಿಂದ ಒಂದೇ ವೇದಿಕೆಯಲ್ಲಿ ಹಲವಾರು ಆಯ್ಕೆಗಳಿಗಾಗಿ ಇಲ್ಲಿ ಅವಕಾಶ ಕಲ್ಪಿಸಲಾಗುತ್ತದೆ. ಪಾಲಕರಿಗೆ ಸಮಯದ ಉಳಿತಾಯ ಹಾಗೂ ಸೂಕ್ತ ವಧು-ವರರನ್ನು ಆಯ್ಕೆ ಮಾಡುವ ಸದವಕಾಶವನ್ನು ಇಲ್ಲಿ ನಿರ್ಮಿಸಲಾಗುತ್ತದೆ. ಈಗಾಗಲೇ ಹೆಸರು ನೋಂದಣಿ ಕಾರ್ಯ ಆರಂಭವಾಗಿದ್ದು, ಆಸಕ್ತರು ಶ್ರೀ ದುರ್ಗಾದೇವಿ ಶಿಕ್ಷಣ ಸಮಿತಿ ಶ್ರೀ ಬನಶಂಕರಿ ದೇವಿ ದೇವಸ್ಥಾನದ ಆವರಣ ಗಂಗಾಪುರ ಪೇಟೆ ಗದಗದಲ್ಲಿ ಸದಸ್ಯತ್ವ ಶುಲ್ಕದೊಂದಿಗೆ ಹೆಸರನ್ನು ನೋಂದಾಯಿಸಬೇಕು ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಪ್ರದೇಶ ಕುರುಬ ಸಂಘದ ಗದಗ ತಾಲೂಕಾಧ್ಯಕ್ಷ ನಾಗಪ್ಪ ಗುಗ್ಗರಿ, ಹಾಲುಮತ ಮಹಾಸಭಾದ ರಾಜ್ಯ ಸಂಘಟನಾ ಕಾರ್ಯದರ್ಶಿ ಉಮಾ ದ್ಯಾವನೂರ, ಕುರುಬರ ಸಂಘದ ರಾಜ್ಯ ನಿರ್ದೇಶಕಿ ಚನ್ನಮ್ಮ ಹುಳಕಣ್ಣವರ, ಹಾಲುಮತ ಮಹಾಸಭಾದ ಜಿಲ್ಲಾ ಗೌರವಾಧ್ಯಕ್ಷ ನಾಗರಾಜ ಮೆಣಸಗಿ, ಜಿಲ್ಲಾಧ್ಯಕ್ಷ ಬಸವರಾಜ ನೀಲಗಾರ, ಉಪಾಧ್ಯಕ್ಷ ಸೋಮನಗೌಡ ಪಾಟೀಲ, ರಾಘು ವಗ್ಗನವರ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮುತ್ತು ಜಡಿ, ಸತೀಶ ಗಿಡ್ಡಹನಮಣ್ಣವರ, ಮಂಜುನಾಥ ಜಡಿ, ಹೇಮಂತ ಗಿಡ್ಡಹನಮಣ್ಣವರ, ಉಮೇಶ ಪೂಜಾರ, ಬಸವರಾಜ ಕುರಿ, ಕುಮಾರ ಮಾರನಬಸರಿ, ರವಿ ವಗ್ಗನವರ ಮುಂತಾದವರು ಉಪಸ್ಥಿತರಿದ್ದರು.

> ನೋಂದಣಿಗಾಗಿ ವೆಂಕಟೇಶ ಇಮರಾಪೂರ-9742842133 ಮುತ್ತು ಜಡಿ-9880831983 ಅವರನ್ನು ಹಾಗೂ ಹೆಚ್ಚಿನ ಮಾಹಿತಿಗಾಗಿ ನಾಗರಾಜ ಮೆಣಸಗಿ-9448746400, ಬಸವರಾಜ ನೀಲಗಾರ-8970974959, ಸೋಮನಗೌಡ ಪಾಟೀಲ-9845636775 ಅವರನ್ನು ಸಂಪರ್ಕಿಸಬಹುದು ಎಂದು ರುದ್ರಣ್ಣ ಗುಳಗುಳಿ ಹೇಳಿದರು.

## ಸಂಪಾದಕೀಯ

# ದೆಹಲಿಯ ಇಂಧನ ನಿರಾಕರಣೆ ನೀತಿ: ಮಾಲಿನ್ಯಕ್ಕೆ ಪರಿಹಾರವೇ?

ಜುಲೈ 1 ರಿಂದ ದೆಹಲಿ ಸರ್ಕಾರ ಜಾರಿಗೊಳಿಸಿರುವ ಹಳೆಯ ವಾಹನಗಳಿಗೆ ಇಂಧನ ನಿರಾಕರಣೆ ನೀತಿಯು ಪರಿಸರ ಮಾಲಿನ್ಯ ನಿಯಂತ್ರಣದ ನಿಟ್ಟಿನಲ್ಲಿ ಒಂದು ಮಹತ್ವದ ಹೆಜ್ಜೆಯಾಗಿದೆಯೇ ಅಥವಾ ನಾಗರಿಕರಿಗೆ ಮತ್ತೊಂದು ಸಂಕಷ್ಟ ತಂದೊಡ್ಡಿದೆಯೇ ಎಂಬ ಚರ್ಚೆಗೆ ಗ್ರಾಸವಾಗಿದೆ.

15 ವರ್ಷ ಮೇಲ್ಪಟ್ಟ ಪೆಟ್ರೋಲ್ ಹಾಗೂ 10 ವರ್ಷ ಮೇಲ್ಪಟ್ಟ ಡೀಸೆಲ್ ವಾಹನಗಳಿಗೆ ಇಂಧನ ನಿರಾಕರಿಸುವ ಈ ನಿಯಮ, ಅವುಗಳ ರಸ್ತೆಗಿಳಿಯುವಿಕೆಯನ್ನು ನಿರ್ಬಂಧಿಸುತ್ತದೆ.

ದೆಹಲಿಯಂತಹ ಅತಿ ಹೆಚ್ಚು ವಾಯುಮಾಲಿನ್ಯ ಎದುರಿಸುತ್ತಿರುವ ಮಹಾನಗರಕ್ಕೆ ಇಂತಹ ಕಠಿಣ ಕ್ರಮಗಳು ಅನಿವಾರ್ಯವಾಗಿವೆ ಎಂಬುದರಲ್ಲಿ ಎರಡು ಮಾತಿಲ್ಲ. ಹಳೆಯ ವಾಹನಗಳು ಹೊರಸೂಸುವ ಹೊಗೆಯು ವಾಯು ಗುಣಮಟ್ಟದ ಮೇಲೆ ಭಾರಿ ಪರಿಣಾಮ ಬೀರುತ್ತದೆ. ಆದರೆ, ಈ ನಿಯಮ ಜಾರಿಗೆ ತರುವ ಮುನ್ನ ಪರ್ಯಾಯ ವ್ಯವಸ್ಥೆಗಳು ಹಾಗೂ ಆರ್ಥಿಕವಾಗಿ ಹಿಂದುಳಿದವರ ಮೇಲಾಗುವ ಪರಿಣಾಮಗಳ ಬಗ್ಗೆ ಮತ್ತಷ್ಟು ಚಿಂತಿಸಬೇಕಿತ್ತು.

ಒಂದೆಡೆ ಪರಿಸರ ಸಂರಕ್ಷಣೆ ತುರ್ತು ಅಗತ್ಯ. ಮತ್ತೊಂದೆಡೆ, ತಮ್ಮ ಜೀವನೋಪಾಯಕ್ಕೆ ಹಳೆಯ ವಾಹನಗಳನ್ನೇ ಅವಲಂಬಿಸಿರುವ ಲಕ್ಷಾಂತರ ಜನರಿದ್ದಾರೆ. ಏಕಾಏಕಿ ಇಂಧನ ನಿರಾಕರಣೆ ನೀತಿಯು ಅವರಿಗೆ ತಕ್ಷಣದ ಆರ್ಥಿಕ ಹೊರೆ ಮತ್ತು ಸಂಚಾರ ಅಡಚಣೆಯನ್ನು ಸೃಷ್ಟಿಸಿದೆ.

ಎಲೆಕ್ಟ್ರಿಕ್ ವಾಹನಗಳಿಗೆ ಪ್ರೋತ್ಸಾಹ, ಸಬ್ಸಿಡಿ, ಸುಲಭ ಸಾಲದಂತಹ ಪರಿಹಾರ ಕ್ರಮಗಳನ್ನು ವ್ಯಾಪಕವಾಗಿ ಜಾರಿಗೊಳಿಸಿ ನಂತರ ಇಂತಹ ಕಠಿಣ ನಿರ್ಧಾರಗಳನ್ನು ಕೈಗೊಂಡಿದ್ದರೆ ಉತ್ತಮವಿತ್ತು.

ಮಾಲಿನ್ಯ ನಿಯಂತ್ರಣದ ಸದುದ್ದೇಶದ ಜೊತೆಗೆ, ಜನರ ಬದುಕಿನ ಮೇಲಾಗುವ ಪರಿಣಾಮಗಳನ್ನೂ ಸಮತೋಲನಗೊಳಿಸುವುದು ಸರ್ಕಾರದ ಮುಂದಿರುವ ದೊಡ್ಡ ಸವಾಲು.

## ಏಷ್ಯಾದ ಪರಿಶುದ್ಧ ಗಾಳಿಯ ಆಗರ, ಪರಿಸರ ಪ್ರಿಯರ ನೆಚ್ಚಿನ ತಾಣ

# ಭೂರಮೆಯ ಸ್ವರ್ಗ ಕಪ್ಪತ್ತಗುಡ್ಡ

‘ಎಪ್ಪತ್ತು ಗಿರಿ ಸುತ್ತುವುದಕ್ಕಿಂತ ಕಪ್ಪತ್ತಗಿರಿ ಸುತ್ತುವುದು ಮೇಲು’, ‘ಕಣ್ಣಿದ್ದವನು ಕನಕಗಿರಿ ನೋಡಬೇಕು, ಕಾಲಿದ್ದವನು ಕಪ್ಪತ್ತಗುಡ್ಡ ನೋಡಬೇಕು’ ಎನ್ನುವ ಹಲವಾರು ನುಡಿಗಟ್ಟುಗಳು ಕಪ್ಪತ್ತಗಿರಿ ಕುರಿತು ಉತ್ತರ ಕರ್ನಾಟಕದಾದ್ಯಂತ ಮನೆ ಮಾತಾಗಿವೆ. ಇಂತಹ ಕಪ್ಪತ್ತಗುಡ್ಡವೀಗ ಮುಂಗಾರು ಮಳೆಯ ಸಿಂಚನದಿಂದ ಹಚ್ಚ ಹಸಿರಿನಿಂದ ಕಂಗೊಳಿಸುತ್ತಿದೆ. ಇದು ಪ್ರವಾಸಿಗರ ಆಕರ್ಷಣೆಗೆ ಪ್ರಮುಖ ಕಾರಣವಾಗಿದೆ.

ಬೀಸುವ ತಂಗಾಳಿ ಚದುರುತ್ತಿರುವ ಮೋಡಗಳನ್ನು ಇನ್ನೇನು ಓಡಿಸಿಕೊಂಡು ಹೋಗುವಂತಿದೆ. ಶ್ವೇತಮೋಡಗಳ ನಡುವೆ ಹಚ್ಚಹಸಿರ ಪರ್ವತ ಕಣ್ಮನ ಸೆಳೆಯದೇ ಇರದು. ಗದಗ ಜಿಲ್ಲೆಯ ಶಿರಹಟ್ಟಿ ಹಾಗೂ ಮುಂಡರಗಿ ತಾಲೂಕಿನ ವ್ಯಾಪ್ತಿಯಲ್ಲಿರುವ ಈ ಕಪ್ಪತ್ತಗುಡ್ಡ ಏಷ್ಯಾದಲ್ಲಿಯೇ ಶುದ್ಧಗಾಳಿಗೆ ಹೆಸರುವಾಸಿ. ಹೀಗಾಗಿಯೇ ವಾಯು ವಿಹಾರಕ್ಕೂ ಈ ತಾಣ ಪ್ರವಾಸಿಗರಿಗೆ ಹೇಳಿ ಮಾಡಿಸಿದಂತಿದೆ. ಪರಿಶುದ್ಧ ಗಾಳಿ ಬೀಸುವ ತಾಣವಾಗಿಯೂ ಪ್ರಸಿದ್ಧಿ ಪಡೆದಿದೆ. ಈ ಎಲ್ಲ ಕಾರಣಗಳಿಂದ ಕಪ್ಪತ್ತಗಿರಿಯನ್ನು ಉತ್ತರ ಕರ್ನಾಟಕದ ಸಹ್ಯಾದ್ರಿ ಎಂದು ಕರೆಯಲಾಗುತ್ತದೆ.

ಈ ಬೆಟ್ಟದ ತುದಿಯಲ್ಲಿ ಸುಮಾರು 250 ವರ್ಷಗಳ ಹಿಂದೆ ನಿರ್ಮಾಣವಾಗಿರುವ ಅನ್ನಜ್ಞಾನ ದಾಸೋಹ ಮಠವಿದೆ. ಈ ಮಠವು ದಕ್ಷಿಣ ಸಸ್ಯಕಾಶಿಯೆಂದು ಪ್ರಖ್ಯಾತ. ಕಪ್ಪತ್ತಗುಡ್ಡವು ಅಪಾರ ಖನಿಜ, ನೈಸರ್ಗಿಕ



ಸಂಪತ್ತು ಹೊಂದಿದೆ. ಈ ಪ್ರದೇಶವನ್ನು ಇತ್ತೀಚೆಗೆ ಕರ್ನಾಟಕ ಸರ್ಕಾರವು ವನ್ಯಜೀವಿ ಅಭಯಾರಣ್ಯವಾಗಿ ಘೋಷಿಸಿದೆ. ಒಟ್ಟಾರೆ 17,872 ಹೆಕ್ಟೇರ್ ಇರುವ ಕಪ್ಪತಗುಡ್ಡ ಅರಣ್ಯ ಪ್ರದೇಶವು ಗದಗ ತಾಲೂಕಿನಲ್ಲಿ 401.811 ಹೆಕ್ಟೇರ್, ಮುಂಡರಗಿ ತಾಲೂಕಿನಲ್ಲಿ 15,433.673 ಹೆಕ್ಟೇರ್ ಮತ್ತು ಶಿರಹಟ್ಟಿ ತಾಲೂಕಿನಲ್ಲಿ 2016 ಹೆಕ್ಟೇರ್‌ಗಳಷ್ಟು ಪ್ರದೇಶವನ್ನು ಹಂಚಿಕೊಂಡಿದೆ.

ಕಪ್ಪತಗುಡ್ಡಕ್ಕೆ ಗದಗ ಮಾತ್ರವಲ್ಲದೇ ಕೊಪ್ಪಳ, ಬಳ್ಳಾರಿ, ಹಾವೇರಿ ಮತ್ತು ಧಾರವಾಡ ಜಿಲ್ಲೆಯಿಂದ ಪ್ರವಾಸಿಗರು ಆಗಮಿಸುತ್ತಿದ್ದಾರೆ. ಕೇರಳ, ಮಡಿಕೇರಿ, ಚಿಕ್ಕಮಗಳೂರು ಪ್ರವಾಸ ಕೈಗೊಳ್ಳುತ್ತಿದ್ದ ಜನ ಈಗೀಗ ಕಪ್ಪತಗುಡ್ಡಕ್ಕೆ ಭೇಟಿ ನೀಡುತ್ತಿದ್ದಾರೆ. ಈ ಬಾರಿ ಮಳೆ ಉತ್ತಮವಾಗಿ ಆಗುತ್ತಿರುವ ಕಾರಣ ಕಪ್ಪತಗುಡ್ಡ ಯಾವುದೇ ಗಿರಿಶಿಖರಗಳ ತಾಣಕ್ಕೂ ಕಡಿಮೆ ಇಲ್ಲದಂತೆ ಹಸಿರಿನಿಂದ ಕಂಗೊಳಿಸುತ್ತಿದೆ.

ಕಪ್ಪತ್ತಗುಡ್ಡ ಇಂದಿಗೂ ತನ್ನ ಮಣ್ಣು, ಗಿಡ, ಮರಗಳೆಲ್ಲದರಲ್ಲೂ ಔಷಧೀಯ ಗುಣ ಹೊಂದಿದೆ. ಅತೀ ಹೆಚ್ಚು ಆಯುರ್ವೇದಿಕ್ ಗಿಡಗಳನ್ನು ಹೊಂದಿರುವ ಕಾರಣಕ್ಕಾಗಿ ಇಲ್ಲಿಗೆ ಬಂದು ಹೋದರೆ ಸಾಕು, ಯಾವ ದವಾಖಾನೆನೂ ಬೇಡ ಎಂಬ ಪ್ರತೀತಿ ಇದೆ.

‘ಎಪ್ಪತ್ತು ಗಿರಿಗಳಿಗಿಂತ ಕಪ್ಪತ್ತಗಿರಿ ಮೇಲೆ’ ಎಂಬುದು ಸ್ಕಂದ ಪುರಾಣದಲ್ಲಿನ ಉಲ್ಲೇಖ. ಅಂದರೆ ಎಪ್ಪತ್ತು ಗಿರಿಗಳಲ್ಲಿ ಸಿಗದ ಔಷಧಿ ಗಿಡಮೂಲಿಕೆಗಳು ಕಪ್ಪತ್ತಗುಡ್ಡ ಒಂದರಲ್ಲೇ ಸಿಗುವ ಕಾರಣಕ್ಕೆ ಈ ಮಾತು ಬಂತೆಂದು ಹಿರಿಯರು ಹೇಳುತ್ತಾರೆ. ಗಿಡಮೂಲಿಕೆಗಳನ್ನು ಅರಸಿ ವರ್ಷವಿಡೀ ಇಲ್ಲಿಗೆ ಎಲ್ಲೆಲ್ಲಿಂದಲೋ ಜನ ಬರುತ್ತಲೇ ಇರುತ್ತಾರೆ.

ಲಕ್ಷಾಂತರ ಸಸಿಗಳ ಪಾಲನೆ-ಪೋಷಣೆ ಮಾಡುವ ಮೂಲಕ ಸಾವಿರಾರು ಹೆಕ್ಟೇರ್ ಈ ಪ್ರದೇಶದಲ್ಲಿ ದೈವೀವನ, ನೆಡುತೋಪುಗಳು ಮತ್ತು ರಸ್ತೆ ಬದಿ ಮರ ಬೆಳಸುವುದು, ಶಾಲಾವನ, ಮಗುವಿಗೊಂದು ವನ ನಿರ್ಮಾಣ ಮಾಡುವುದು ಸೇರಿದಂತೆ ‘ಹಸಿರು ಹೊನ್ನು- ಹಸಿರು ಉಸಿರು’ ಯೋಜನೆ ಜಾರಿಗೊಳಿಸಿ ಕಪ್ಪತ್ತಗುಡ್ಡದ ಆಪತ್ತನ್ನು ದೂರಗೊಳಿಸುವ ಕಾಲ ಸನ್ನಿಹಿತವಾಗುತ್ತಿರುವುದು ಸಂತಸದ ಸಂಗತಿ.

ಕಪ್ಪತಗುಡ್ಡ ವನ್ಯಜೀವಿ ಅಭಯಾರಣ್ಯ ಸುಮಾರು 32,346 ಹೆಕ್ಟೇರ್‌ಗಳನ್ನು ಒಳಗೊಂಡಿದೆ ಮತ್ತು ಜಲ ಪ್ರದೇಶಗಳು, ಕಾಡುಗಳು, ಪೊದೆಗಳು ಮತ್ತು ಹುಲ್ಲುಗಾವಲುಗಳು ಸೇರಿದಂತೆ ವಿವಿಧ ಪರಿಸರ ವ್ಯವಸ್ಥೆಗಳನ್ನು ಹೊಂದಿದೆ. ಇದು ಲಂಗೂರ್‌ಗಳು, ಜಿಂಕೆಗಳು, ಕಾಡು ಬೆಕ್ಕುಗಳು, ಪಕ್ಷಿಗಳು, ಕೃಷ್ಣಮೃಗಗಳು, ಚುಕ್ಕೆ ಜಿಂಕೆಗಳು, ಬೊಗಳುವ ಜಿಂಕೆಗಳು, ಚಿರತೆಗಳು, ಭಾರತೀಯ ತೋಳಗಳು ಮತ್ತು ಪಟ್ಟೆ ಹೈನಾಗಳಿಗೆ ಸುರಕ್ಷಿತ ತಾಣವಾಗಿದೆ ಎಂದು ಹೇಳಲಾಗುತ್ತದೆ.

ಕೊನೆಯದಾಗಿ, ಕಪ್ಪತ್ತಗುಡ್ಡವು ಪ್ರವಾಸಿತಾಣ ವ್ಯಾಪ್ತಿಗೆ ಒಳಪಟ್ಟರೆ ಅದು ಅರಣ್ಯ ನಾಶ ಹಾಗೂ ಪರಿಸರ ಮಾಲಿನ್ಯಕ್ಕೆ ರಹದಾರಿ ಮಾಡಿಕೊಟ್ಟಂತಾಗುತ್ತದೆ. ಪರಿಸರ ಸೂಕ್ಷ್ಮ ವಲಯಗಳು ಮಾನವನ ಹಸ್ತಕ್ಷೇಪದಿಂದ ದೂರವಿದ್ದಷ್ಟು ಒಳಿತು. ಕಪ್ಪತ್ತಗುಡ್ಡವನ್ನು ಪ್ರವಾಸಿತಾಣವನ್ನಾಗಿ ಮಾಡಿದರೆ ಅಲ್ಲಿ ಪ್ರವಾಸಿಗರ ಸಂಖ್ಯೆ ಹೆಚ್ಚಾಗುತ್ತದೆ. ಅಲ್ಲಿನ ಪ್ರಾಣಿ ಸಂಕುಲ ಭಯದಿಂದ ನಾಡು ಸೇರಿ ಜನರ ಜೀವನದ ಅಸ್ತಿತ್ವಕ್ಕೆ ಧಕ್ಕೆ ಬರಬಹುದು ಹಾಗೂ ಪ್ಲಾಸ್ಟಿಕ್ ಮತ್ತು ಮತ್ತಿತರ ವಸ್ತುಗಳ ಬಳಕೆ ಹೆಚ್ಚಾಗುತ್ತದೆ. ಅಭಿವೃದ್ಧಿ ಹೆಸರಿನಲ್ಲಿ ಅರಣ್ಯ ಹಾಗೂ ವನ್ಯಜೀವಿಗಳು ಸಂಕಷ್ಟಕ್ಕೆ ಸಿಲುಕುವ ಸಾಧ್ಯತೆ ಇದೆ. ಆದ್ದರಿಂದ ಕಪ್ಪತ್ತಗುಡ್ಡವನ್ನು ಯಥಾರೀತಿ ಕಾಯ್ದುಕೊಳ್ಳಬೇಕು ಎಂಬುದು ಪರಿಸರ ಪ್ರಿಯರ ಕಾಳಜಿಯಾಗಿದೆ.



– ಬಸವರಾಜ ಎಮ್.ಯರಗುಪ್ಪಿ.
ಲಕ್ಷ್ಮೇಶ್ವರ.
(ಮಾಹಿತಿ ಕೃಪೆ: ಅರಣ್ಯ, ಪ್ರವಾಸೋದ್ಯಮ ಇಲಾಖೆ)

## ಆನ್‌ಲೈನ್ ಗೇಮ್ ಚಟ: ಬರೋಬ್ಬರಿ 18 ಲಕ್ಷ ಕಳೆದುಕೊಂಡ ಯುವಕ ನೇಣಿಗೆ ಶರಣು!

■ ವಿಜಯಸಾಕ್ಷಿ ಸುದ್ದಿ, ದಾವಣಗೆರೆ

ಆನ್‌ಲೈನ್ ಗೇಮ್‌ನಲ್ಲಿ ಬರೋಬ್ಬರಿ 18 ಲಕ್ಷ ಕಳೆದುಕೊಂಡ ಯುವಕನೋರ್ವ ಮನನೊಂದು ವಿಡಿಯೋ ಮಾಡಿಟ್ಟು ನೇಣಿಗೆ ಶರಣಾಗಿರುವ ಘಟನೆ ದಾವಣಗೆರೆಯ ಕೆಟಿಜೆ ನಗರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಜರುಗಿದೆ.

25 ವರ್ಷದ ಶಶಿಕುಮಾರ್ ಮೃತ ಯುವಕ. ಯುವಕ ಆನ್‌ಲೈನ್ ಗೇಮ್‌ನಲ್ಲಿ 18 ಲಕ್ಷ ರೂ. ಕಳೆದುಕೊಂಡಿದ್ದ. ಇದರಿಂದ ನೊಂದು ಆನ್‌ಲೈನ್ ಗೇಮ್ ನಿಷೇಧಿಸುವಂತೆ ಪ್ರಧಾನಿ, ಮುಖ್ಯಮಂತ್ರಿಗಳಿಗೆ ಡಿಸಿ ಹಾಗೂ ಎಸ್ಪಿ ಮುಖಾಂತರ ಮನವಿ ಮಾಡಿಕೊಂಡಿದ್ದ. ದೂರು ನೀಡಿದರು ಯಾವುದೇ ಕ್ರಮವಾಗದ ಹಿನ್ನಲೆಯಲ್ಲಿ ಸೆಲ್ಫಿ ವಿಡಿಯೋ ಮಾಡಿ ನೋವು ತೋಡಿಕೊಂಡಿದ್ದಾನೆ. ಬಳಿಕ ನೇಣಿಗೆ ಶರಣಾಗಿದ್ದಾನೆ.





ಕರ್ನಾಟಕ ರಾಜ್ಯ ಶಿಕ್ಷಣಾಧಿಕಾರಿಗಳ ಸಂಘದ ತಾಲೂಕಾ ಘಟಕದ ಅಧ್ಯಕ್ಷರಾಗಿ ಶರಣಬಸವ ಕೆ.ಹವಾಲ್ದಾರ, ಉಪಾಧ್ಯಕ್ಷರಾಗಿ ವೈ.ಪಿ. ಜಿಗಳೂರ ಮತ್ತು ಕಾರ್ಯದರ್ಶಿಯಾಗಿ ಬಿ.ಸಿ. ಪಟ್ಟೇದ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

## ಬಿಜೆಪಿ ನಾಯಕನ ಬಂಧನಕ್ಕೆ ಒತ್ತಾಯಿಸಿ ಅಧಿಕಾರಿಗಳಿಂದ ಸಾಮೂಹಿಕ ರಜೆ

■ ವಿಜಯಸಾಕ್ಷಿ ಸುದ್ದಿ, ಒಡಿಶಾ

ಭುವನೇಶ್ವರ ಮಹಾನಗರ ಪಾಲಿಕೆಯ (ಬಿಎಂಸಿ) ಹಿರಿಯ ಅಧಿಕಾರಿಯ ಮೇಲೆ ಸೋಮವಾರ ನಡೆದ ಹಲ್ಲೆಯನ್ನು ಖಂಡಿಸಿ ಒಡಿಶಾದ 20ಕ್ಕೂ ಹೆಚ್ಚು ಜಿಲ್ಲೆಗಳಲ್ಲಿ ಹಿರಿಯ ಅಧಿಕಾರಿಗಳು ಕಳೆದ ಎರಡು ದಿನಗಳಿಂದ ಸಾಮೂಹಿಕ ರಜೆ ಹಾಕಿದ್ದಾರೆ. ಇದರಿಂದ ಸರ್ಕಾರಿ ಕಚೇರಿಗಳಲ್ಲಿ ಆಡಳಿತಾತ್ಮಕ ಕೆಲಸಗಳು ವ್ಯತ್ಯಯಗೊಂಡಿವೆ ಎಂದು ವರದಿಯಾಗಿದೆ.

ಬ್ಲಾಕ್, ತಾಲೂಕು ಮತ್ತು ಜಿಲ್ಲಾ ಮಟ್ಟದ ಸರ್ಕಾರಿ ಕಚೇರಿಗಳಲ್ಲಿ ಸಾರ್ವಜನಿಕ ಸೇವೆಗಳನ್ನು ಒದಗಿಸುವಲ್ಲಿ ಒಡಿಶಾ ಆಡಳಿತ ಸೇವೆ (ಒಎಎಸ್) ಮತ್ತು ಒಡಿಶಾ ಕಂದಾಯ ಸೇವೆ (ಒಆರ್‌ಎಸ್) ಅಧಿಕಾರಿಗಳು ಬೆನ್ನೆಲುಬಾಗಿರುವುದರಿಂದ, ಅವರ ಸಾಮೂಹಿಕ ಪ್ರತಿಭಟನಾ ರಜೆ ಆಡಳಿತದ ಮೇಲೆ ಪರಿಣಾಮ ಬೀರಿದೆ.

## ಶ್ರೀ ಸಿದ್ಧಾಂತ ಶಿಖಾಮಣಿ ಆಧ್ಯಾತ್ಮಿಕ ಪ್ರವಚನ ಮಾಲಿಕೆಯಲ್ಲಿ ಕಾಶೀ ಶ್ರೀಗಳು

# ಭಾರತೀಯ ಸಂಸ್ಕೃತಿ ಜಗತ್ತಿನಲ್ಲಿಯೇ ಶ್ರೇಷ್ಠ

■ ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಸಂಸ್ಕೃತಿಯು ಜಗತ್ತಿನಲ್ಲಿಯೇ ಅತ್ಯಂತ ಶ್ರೇಷ್ಠತೆ ಪಡೆದ ಸಂಸ್ಕೃತಿಯಾಗಿದೆ. ಇಂತಹ ಪವಿತ್ರ ಸಂಸ್ಕೃತಿ ಮತ್ತು ಸಂಸ್ಕಾರವನ್ನು ನಾವಿಂದು ನಮ್ಮ ಮಕ್ಕಳಿಗೆ ರೂಢಿಸಬೇಕಿದೆ ಎಂದು ಜಂಗಮವಾಡಿಮಠ ವಾರಣಾಸಿ ಕಾಶೀ ಮಹಾಪೀಠದ ಜ. ಡಾ. ಮಲ್ಲಿಕಾರ್ಜುನ ವಿಶ್ವಾರಾಧ್ಯ ಶಿವಾಚಾರ್ಯ ಭಗವತ್ಪಾದಂಗಳವರು ಹೇಳಿದರು.

ಅವರು ಮಂಗಳವಾರ ನಗರದ ಗಾಣಿಗ ಭವನದಲ್ಲಿ ಗದಗ-ಬೆಟಗೇರಿ ಶ್ರೀ ಸಿದ್ಧಾಂತ ಶಿಖಾಮಣಿ ಆಧ್ಯಾತ್ಮಿಕ ಪ್ರವಚನ ಸಮಿತಿ ಏರ್ಪಡಿಸಿರುವ ಆಷಾಢ ಮಾಸದ ಇಷ್ಟಲಿಂಗ ಮಹಾಪೂಜೆ ಹಾಗೂ ಶ್ರೀ ಸಿದ್ಧಾಂತ ಶಿಖಾಮಣಿ ಆಧ್ಯಾತ್ಮಿಕ ಪ್ರವಚನ ಮಾಲಿಕೆ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದರು.



ನರೇಗಲ್ ಹಿರೇಮಠದ ಪೂಜ್ಯ ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮಿಗಳು ಶ್ರೀ ಸಿದ್ಧಾಂತ ಶಿಖಾಮಣಿ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದರು. ನೇತೃತ್ವ ವಹಿಸಿದ್ದ ಮಲ್ಲಸಮುದ್ರಗಿರಿಯ ಓಂಕಾರೇಶ್ವರಮಠದ ಪೂಜ್ಯ ಫಕೀರೇಶ್ವರ ಶಿವಾಚಾರ್ಯ ಸ್ವಾಮಿಗಳು ಹಾಗೂ ಎಂ.ಜಿ. ಸಂತೋಜಿ ಮಾತನಾಡಿದರು. ಚಳಗೇರಿ ಹಿರೇಮಠ ಸಿದ್ಧಲಿಂಗ ಶಿವಾಚಾರ್ಯ ಮಹಾಸ್ವಾಮಿಗಳು ಉಪಸ್ಥಿತರಿದ್ದರು.

ಸನಾತನ ಸಂಸ್ಕೃತಿ ಮತ್ತು ಪರಂಪರೆಗೆ ತನ್ನದೇ ಆದ ಹಿರಿಮೆ-ಗರಿಮೆ ಇದೆ. ಋಷಿ ಮುನಿಗಳು, ದಾರ್ಶನಿಕರು ಇದಕ್ಕೆ ಭದ್ರ ಬುನಾದಿ ಒದಗಿಸಿದ್ದಾರೆ. ಮನುಕುಲದ ಒಳಿತಿಗಾಗಿ ಇರುವ ಈ ಸಂಸ್ಕೃತಿ ಮತ್ತು ಸಂಸ್ಕಾರವನ್ನು ನಮ್ಮ ಬದುಕನ್ನು ಹಸನಾಗಿಸಿಕೊಳ್ಳಲು ಪರಿಪಾಲಿಸುವದು ಅವಶ್ಯ ಎಂದು ಕಾಶೀ ಶ್ರೀಗಳು ಪ್ರತಿಪಾದಿಸಿದರು.

ಇದೇ ಸಂದರ್ಭದಲ್ಲಿ ಉಡನಕಲ್ಲ ಸರ್ಕಾರಿ ಪ್ರೌಢಶಾಲೆಯ ಸಂಗೀತ ಶಿಕ್ಷಕರಾದ ವೀರಭದ್ರಪ್ಪ ಹಿರೆಬೆನಕಲ್ ಅವರಿಗೆ ‘ದಿವ್ಯಾಂಗ ಪ್ರತಿಭಾ ಪುರಸ್ಕಾರ’ ನೀಡಿ ಗೌರವಿಸಲಾಯಿತು. ಅಕ್ಕಮ್ಮ ಗುರುಸ್ವಾಮಿಮಠ ಅವರಿಂದ ಸಂಗೀತ ಪ್ರಾರ್ಥನೆ ಜರುಗಿ-ತು. ಗುರುಸಿದ್ಧಯ್ಯ ಹಿರೇಮಠ ಸ್ವಾಗತಿಸಿದರು. ಸಮಿತಿಯ ಕಾರ್ಯಾಧ್ಯಕ್ಷ ವ್ಹಿ.ಕೆ. ಗುರುಮಠ ನಿರೂಪಿಸಿ ವಂದಿಸಿದರು.

ಎಸ್.ಐ. ಯಾಳಗಿ, ಮಹೇಶ್ಚಂದ್ರ ಕಬಾಡರ, ಡಾ. ಸಂತೋಷ ತೋಟಗಂಟಿಮಠ, ಎಂ.ಜಿ. ಸಂತೋಜಿ, ಗೂಳಯ್ಯ ಮಾಲಗಿತ್ತಿಮಠ, ವಿಜಯಕುಮಾರ ಗಡ್ಡಿ, ಈರಪ್ಪ ಬಲೂಚಗಿ, ಬಸವರಾಜ ಗಾಳಪ್ಪನವರ, ಎಂ.ಪಿ. ಪಾಟೀಲ, ಗೌರಮ್ಮ ಹಿರೇಮಠ, ಶರಣಪ್ಪ ಬಳಿಗಾರ ದಂಪತಿಗಳನ್ನು ಪೂಜ್ಯರು ಸನ್ಮಾನಿಸಿ ಆಶೀರ್ವದಿಸಿದರು.

# ಮೂಲಭೂತ ಸೌಕರ್ಯ ಒದಗಿಸುವಂತೆ ಮನವಿ




■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಕ್ಷಣಾ ವೇದಿಕೆಯ ಗದಗ ಜಿಲ್ಲಾ ಘಟಕ ವತಿಯಿಂದ ಬಣ್ಣದ ನಗರದಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸುವಂತೆ ಒತ್ತಾಯಿಸಿ ನಗರದ ಗಾಂಧಿ ವೃತ್ತದಿಂದ ನಗರಸಭೆಯವರೆಗೆ ಪ್ರತಿಭಟನೆ ನಡೆಸಿದರು.

ಈ ಸಂದರ್ಭದಲ್ಲಿ ಕರವೇ ಗದಗ ಜಿಲ್ಲಾಧ್ಯಕ್ಷ ಹನುಮಂತಪ್ಪ ಎಚ್.ಅಬ್ಬಿಗೇರಿ ಮಾತನಾಡಿ, ಗದಗ-ಬೆಟಗೇರಿ ನಗರಸಭೆ ವ್ಯಾಪ್ತಿಯ 3ನೇ ವಾರ್ಡ್ ಬಿ.ಬಿ. ಬಣ್ಣದ ನಗರದಲ್ಲಿ ಮೂಲಭೂತ ಸೌಕರ್ಯಗಳು ಸಮರ್ಪಕವಾಗಿಲ್ಲ. ಜರ್ಮನಿ ಆಸ್ಪತ್ರೆಯಿಂದ ನಗರಕ್ಕೆ ಸಂಪರ್ಕಿಸುವ ರಸ್ತೆ ಸಂಪೂರ್ಣ ಹಾಳಾಗಿದೆ.

ಇದನ್ನು ಸರಿಪಡಿಸಬೇಕು. ಬಣ್ಣದ ನಗರಕ್ಕೆ ಹೋಗುವ ರಸ್ತೆಯಲ್ಲಿ ಬೀದಿ ದೀಪಗಳನ್ನು ಸಮರ್ಪಕವಾಗಿ ನಿರ್ವಹಿಸಬೇಕು. ಅಲ್ಲದೆ, ಮಳೆ ನೀರು ಸರಾಗವಾಗಿ ಹರಿದುಹೋಗುವಂತೆ ಗಟಾರ ವ್ಯವಸ್ಥೆ ಮಾಡಬೇಕು ಎಂದು ವಿನಂತಿಸಿದರು.

ಈ ಸಂದರ್ಭದಲ್ಲಿ ನಿಂಗನಗೌಡ ಮಾಲೀಪಾಟೀಲ, ವಿನಾಯಕ ಬದಿ, ಮಾರುತಿ ಈಳಿಗಾರ, ತೌಸೀಪ ಢಾಲಾಯತ್, ಆಶಾ ಜುಳಗುಡ್ಡ, ಹನುಮಪ್ಪ ಪೂಜಾರಿ, ರತ್ನಮ್ಮ ಯಲಬುರ್ಗಾ, ಶರಣಪ್ಪ ಪುರಟಗೇರಿ, ಮುತ್ತಣ್ಣ ಚವಡಣ್ಣವರ, ಹುಸೇನ ಅಕ್ಕಿ, ಸಲೀಂ ಶಿರವಾರ, ರೆಹಮಾನ ದರ್ಗಾದ, ರಫೀಕ್, ಶಿರಾಜ ಹೊಸಮನಿ, ಯಲ್ಲಪ್ಪ ಗೊಕಾಕ, ಶ್ರೀಕಾಂತ ಪೂಜಾರಿ, ಶಿವು ಮಠದ, ಕಾಂತೇಶ, ಲಕ್ಷ್ಮಣ ಕಮ್ಮಾರ, ಗೌಡಪ್ಪ, ರಮೇಶ, ಶಿವಪ್ಪ, ವರಮ್ಮ, ಜ್ಯೋತಿ, ಸರೋಜಮ್ಮ, ಮಾಲವ್ವ, ಬಸಮ್ಮ ಮುಂತಾದವರಿದ್ದರು.

# ಠೇವಣಿದಾರರ ಹಣವನ್ನು ಮರಳಿ ಕೊಡಿಸಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದಲ್ಲಿ 8 ವರ್ಷದ ಹಿಂದೆ ಪ್ರಾರಂಭವಾಗಿರುವ ಬೈಲಹೊಂಗಲದ ಕಿತ್ತೂರು ರಾಣಿ ಚನ್ನಮ್ಮ ಅರ್ಬನ್ ಕ್ರೆಡಿಟ್ ಸೌಹಾರ್ದ ಸಹಕಾರಿ ಸಂಘದ ಲಕ್ಷ್ಮೇಶ್ವರ ಶಾಖೆಯಲ್ಲಿ ಕೊಟ್ಯಾಂತರ ರೂಗಳ ಠೇವಣಿ ಹಣವನ್ನು ಠೇವಣಿದಾರರಿಗೆ ನೀಡದೆ ಸತಾಯಿಸುತ್ತಿದ್ದು, ಅದರ ಕೇಂದ್ರ ಕಚೇರಿಯ ಆಡಳಿತ ಮಂಡಳಿಯವರಿಗೆ ವಂಚನೆ ಆರೋಪದಡಿಯಲ್ಲಿ ತಕ್ಕ ಶಿಕ್ಷೆ ನೀಡಬೇಕು ಮತ್ತು ಠೇವಣಿದಾರರ ಹಣ ಮರಳಿ ದೊರೆಯುವಂತೆ ಮಾಡಬೇಕೆಂದು ಆಗ್ರಹಿಸಿ ಠೇವಣಿದಾರರು ಗೋಕಾಕದ ಜೈಹೋ ಜನತಾ ವೇದಿಕೆಯ ಸಹಯೋಗದಲ್ಲಿ ತಹಸೀಲ್ದಾರರ ಮೂಲಕ ಮುಖ್ಯಮಂತ್ರಿ, ಸಹಕಾರಿ ಸಚಿವ ಮತ್ತು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಈ ವೇಳೆ ವೇದಿಕೆಯ ಸಂಸ್ಥಾಪಕ ರಾಜ್ಯಾಧ್ಯಕ್ಷ ಶಿವಾನಂದ ಹಿರೇಮಠ ಮತ್ತು ಸಾಮಾಜಿಕ ಹೋರಾಟಗಾರ ರವಿ ಹೊನ್ನಿಕೊಳ್ಳ ಮಾತನಾಡಿ, ಪಟ್ಟಣದಲ್ಲಿ ಬೈಲಹೊಂಗಲದ ಕಿತ್ತೂರು ರಾಣಿ ಚನ್ನಮ್ಮ ಅರ್ಬನ್ ಕ್ರೆಡಿಟ್ ಸೌಹಾರ್ದ ಸಹಕಾರಿ ಸಂಘವನ್ನು ಸ್ಥಾಪಿಸಿ ಅದರ ಮೂಲಕ ನೂರಾರು ಜನರಿಂದ ಠೇವಣಿ ಸಂಗ್ರಹಿಸಿ ಇದೀಗ ಜನರಿಗೆ ಹಣ ನೀಡದೇ ಸತಾಯಿಸುತ್ತಿದ್ದು, ಕೋಟ್ಯಾಂತರ ರೂ ಹಣವನ್ನು ವಂಚಿಸಿದ್ದಾರೆ. ಪಟ್ಟಣದ ಶಾಖೆಯಲ್ಲಿ ಸುಮಾರು 5.25 ಕೋಟಿಗೂ ಅಧಿಕ ಠೇವಣಿ ಹಣವಿದ್ದು, ಇದೀಗ ಹಣವನ್ನು ನೀಡದೆ ಬಡವರ ರಕ್ತ ಹೀರುತ್ತಿದ್ದಾರೆ ಎಂದು ಆರೋಪಿಸಿದರಲ್ಲದೆ, ಕೂಡಲೇ ಠೇವಣಿದಾರರ ಹಣವನ್ನು ಮರಳಿ ದೊರೆಯುವಂತೆ ಮಾಡಬೇಕು ಎಂದು ಮನವಿ ಮಾಡಿದರು.

ಮನವಿ ಸ್ವೀಕರಿಸಿದ ತಹಸೀಲ್ದಾರ ವಾಸುದೇವ ಸ್ವಾಮಿ, ಈ ಕುರಿತಂತೆ ಪರಿಶೀಲನೆ ಮಾಡಿ ಸೂಕ್ತ ಕ್ರಮ ಕೈಗೊಳ್ಳುವ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಠೇವಣಿದಾರರಾದ ಅಪ್ಪಣ್ಣ ಸೊರಟೂರ, ಸಚಿನ್ ಕರ್ಜೆಕಣ್ಣವರ, ದಿನೇಶ ಗಾಂಜಿ, ವಿ.ಸಿ. ರಬಕವಿ, ಎಸ್.ಎಸ್. ವಸ್ತ್ರದ, ಮೃತ್ಯುಂಜಯ ಹಾವೇರಿಮಠ, ಮಹಾಂತೇಶ ಕರ್ಜೆಕಣ್ಣವರ, ಶ್ರೀಪಾಲ ಗಾಂಧಿ, ಎಸ್.ಎನ್. ಮಲ್ಲಾಡದ, ಈರಣ್ಣ ದವಡಿ, ಬಸವರಾಜ ಚಕ್ರಸಾಲಿ, ಪ್ರಾಣೇಶ ವ್ಯಾಪಾರಿ, ಮಧು ಗಾಂಧಿ, ಋಷಿ ಗಾಂಧಿ ಮುಂತಾದವರಿದ್ದರು.

## ರೋಟರಿ ಕ್ಲಬ್ ಗದಗ-ಬೆಟಗೇರಿ ವೆಲ್‌ಫೇರ್ ಸೊಸೈಟಿಯಿಂದ ನೇತ್ರ ಶಸ್ತ್ರ ಚಿಕಿತ್ಸಾ ಶಿಬಿರ

# 17 ಜನರಿಗೆ ನೇತ್ರ ಶಸ್ತ್ರ ಚಿಕಿತ್ಸೆ



ಶಿಬಿರವನ್ನು ದಿ. ರಾಮರಾವ್ ಎಮ್.ಕುಲಕರ್ಣಿ ಹಾಗೂ ದಿ. ಜಾನಕಿಬಾಯಿ ರಾ.ಕುಲಕರ್ಣಿ ಇವರ ಸ್ಮರಣಾರ್ಥ ಮಾಧವ ರಾಮರಾವ್ ಕುಲಕರ್ಣಿ ಹಾಗೂ ಕುಟುಂಬದವರು ಗದಗ ಹಾಗೂ ದಿ. ಸೋಮಪ್ಪ ಎಸ್.ಡಂಬಳ ಹಾಗೂ ದಿ. ಶಕುಂತಲಾ ಎಸ್.ಡಂಬಳ ಇವರ ಸ್ಮರಣಾರ್ಥ ಪ್ರೇಮಾ ಮೇಟಿ ಹಾಗೂ ಸಹೋದರರು ಹಾಗೂ ಸಹೋದರಿಯರು ವಹಿಸಿದ್ದರು. ಸುಮಾರು 45 ಜನ ರೋಗಿಗಳನ್ನು ತಪಾಸಣೆ ಮಾಡಿ ಶಸ್ತ್ರ ಚಿಕಿತ್ಸೆ ಅವಶ್ಯವಿದ್ದ ಹಾಗೂ ಯೋಗ್ಯರಾದ 17 ಜನರಿಗೆ ನೇತ್ರ ಶಸ್ತ್ರ ಚಿಕಿತ್ಸೆಯನ್ನು ಕೈಗೊಳ್ಳಲಾಯಿತು.

■ ವಿಜಯಸಾಕ್ಷಿ ಸುದ್ದಿ, ಗದಗ

ರೋಟರಿ ಕ್ಲಬ್ ಗದಗ-ಬೆಟಗೇರಿ, ಜಿಲ್ಲಾ ಕಾರ್ಯಕ್ರಮ ವ್ಯವಸ್ಥಾಪಕರು, ಅಂಧತ್ವ ನಿವಾರಣಾ ವಿಭಾಗ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೊಸೈಟಿ ಗದಗ ಇವರ ಸಹಯೋಗದೊಂದಿಗೆ ರೋಟರಿ ಕ್ಲಬ್ ಗದಗ-ಬೆಟಗೇರಿ ವೆಲ್‌ಫೇರ್ ಸೊಸೈಟಿ (ಜಿಲ್ಲಾ ಸ್ಟೇಡಿಯಂ ಹತ್ತಿರ) ನೇತ್ರ ತಪಾಸಣೆ ಹಾಗೂ ಕಣ್ಣಿನಲ್ಲಿ ಮಸೂರ ಅಳವಡಿಸುವ ಶಸ್ತ್ರ ಚಿಕಿತ್ಸಾ ಶಿಬಿರವನ್ನು ಏರ್ಪಡಿಲಾಗಿತ್ತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ರೋಟರಿ ಕ್ಲಬ್ ಗದಗ-ಬೆಟಗೇರಿ ವೆಲ್‌ಫೇರ್ ಸೊಸೈಟಿಯ ಅಧ್ಯಕ್ಷ ಶ್ರೀಧರ ಸುಲ್ತಾನಪೂರ ವಹಿಸಿದ್ದರು. ಪ್ರಾಯೋಜತ್ವ ನೀಡಿದ ಮಾಧವ ರಾಮರಾವ್ ಕುಲಕರ್ಣಿ, ಇನ್ನರ್‌ವ್ಹೀಲ್ ಸಂಸ್ಥೆಯ ಮಾಜಿ ಅಧ್ಯಕ್ಷರಾದ ಪ್ರೇಮಾ ಮೇಟಿ, ಇನ್ನರ್‌ವ್ಹೀಲ್ ಸಂಸ್ಥೆಯ ಅಧ್ಯಕ್ಷರಾದ ನಾಗರತ್ನಾ ಮಾರನಬಸರಿ, ಅಸಿಸ್ಟಂಟ್ ಗವರ್ನರ್ ಶಿವಾಚಾರ್ಯ ಎಸ್. ಹೊಸಳ್ಳಿಮಠ ವೇದಿಕೆಯಮೇಲೆ ಉಪಸ್ಥಿತರಿದ್ದರು.

ರೋಟರಿ ಸಂಸ್ಥೆಯ ಅಧ್ಯಕ್ಷ ರೊ. ಆರ್.ಬಿ. ಉಪ್ಪಿನ ಸ್ವಾಗತಿಸಿದರು. ಕಾರ್ಯದರ್ಶಿ ರೊ. ಬಾಲಕೃಷ್ಣ ಕಾಮತ್ ನಿರೂಪಿಸಿ ವಂದಿಸಿದರು. ನೇತ್ರ ಸಹಾಯಕರಾದ ರುದ್ರೇಶ ಶಸ್ತ್ರ ಚಿಕಿತ್ಸೆಗೆ ಒಳಗಾದ ರೋಗಿಗಳು ತಮ್ಮ ಕಣ್ಣಿನ ಆರೋಗ್ಯವನ್ನು ಯಾವ ರೀತಿ ಕಾಳಜಿವಹಿಸಬೇಕೆಂದು ತಿಳಿಸಿದರು. ರೋಟರಿ ಸಂಸ್ಥೆ ವೆಲ್‌ಫೇರ್ ಸೊಸೈಟಿಯ ಖಜಾಂಚಿ ರೊ. ಚನ್ನವೀರಪ್ಪ ಹುಣಶಿಕಟ್ಟಿ, ರೋಟರಿ ಸಂಸ್ಥೆಯ ಕಾರ್ಯದರ್ಶಿ ಸಂತೋಷ ಅಕ್ಕಿ, ಸದಸ್ಯರಾದ ರೊ. ಡಾ. ರಾಜೇಂದ್ರ ಗಚ್ಚಿನಮಠ, ರೊ. ಡಾ. ಪ್ರದೀಪ ಉಗಲಾಟ, ರೊ. ಡಾ. ಕಮಲಾಕ್ಷಿ ಅಂಗಡಿ, ರೊ. ಅಕ್ಷಯ ಶೆಟ್ಟಿ, ರೊ. ವಿಶ್ವನಾಥ ಯಳಮಲಿ, ಡಾ. ವಿನಯ್ ಟಿಕಾರೆ, ರೊ. ಮಹೇಶ ಹಿಂಡಿ, ರೊ. ಅಶೋಕ ಅಕ್ಕಿ, ರೊ. ಸುರೇಶ ಕುಂಬಾರ, ಮೀರಾ ಕುಲಕರ್ಣಿ, ಮಿಥಿಲಾ ಕುಲಕರ್ಣಿ, ಮುಕುಲ್ ಕುಲಕರ್ಣಿ, ಮುಂತಾದವರು ಉಪಸ್ಥಿತರಿದ್ದರು. ಶಿಬಿರದಲ್ಲಿ ರುದ್ರೇಶ, ನೇತ್ರಾ, ಜ್ಯೋತಿ ದೊಡ್ಡಮನಿ, ದೀಪಾ, ಆನಂದ ಸಿಂಗ್ರಿ ಸಹಕರಿಸಿದರು.

# ಶಾಲಾ ಸಂಸತ್ತು ರಚನೆಗಾಗಿ ಚುನಾವಣೆ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಆ್ಯಂಗ್ಲೋ ಉರ್ದು ಬಾಲಕರ/ಬಾಲಕಿಯರ ಪ್ರೌಢಶಾಲೆಯಲ್ಲಿ 2025–26ನೇ ಸಾಲಿನ ಶಾಲಾ ಸಂಸತ್ತು ರಚನೆಗಾಗಿ ಶಾಲಾ ಹಂತದಲ್ಲಿ ಮಾದರಿ ಇ.ವಿ.ಎಮ್ ಯಂತ್ರದ ಮೂಲಕ ಮೊಬೈಲ್ ಆ್ಯಪ್‌ನಲ್ಲಿ ಚುನಾವಣೆಯನ್ನು ಅಚ್ಚುಕಟ್ಟಾಗಿ ಜರುಗಿಸಲಾಯಿತು.

ಸಮಾರಂಭವನ್ನು ಉದ್ಘಾಟಿಸಿದ ಶಿಕ್ಷಣ ಸಂಸ್ಥೆಯ ಸದಸ್ಯ ಪ್ರೊ. ಎಂ.ಎಂ. ಮುಲ್ಲಾ ಮಾತನಾಡಿ, ಒಂದು ಸಮೃದ್ಧ ದೇಶ ಕಟ್ಟಲು ಹಾಗೂ ಯೋಗ್ಯ ನಾಯಕರನ್ನು ಚುನಾಯಿಸಲು ಚುನಾವಣೆಗಳು ನ್ಯಾಯಯುತವಾಗಿ ನಡೆಯಬೇಕು. ಅಂತಹ ಚುನಾವಣೆಯಲ್ಲಿ ನಾವು ಯಾರಿಗೆ ಮತ ಹಾಕುತ್ತಿದ್ದೇವೆ ಎಂಬ ಅರಿವನ್ನು ಹೊಂದಿರಬೇಕು ಹಾಗೂ ಮತದಾನದ ಮಹತ್ವ ಏನೆಂಬುದನ್ನು ತಿಳಿಯಬೇಕು. ಈ ಶಾಲೆಯಲ್ಲಿ ಮಾದರಿ ಮತಯಂತ್ರದ ಮೂಲಕ ಮತದಾನವನ್ನು ಮಕ್ಕಳಿಗೆ ರೂಢಿಸುತ್ತಿರುವುದು ಸಂತಸದ ಸಂಗತಿ ಎಂದರಲ್ಲದೆ, ಈ ತಂತ್ರಜ್ಞಾನವನ್ನು ಪರಿಚಯಿಸಿದ ಶಿಕ್ಷಕರುಗಳಾದ ಇಸ್ಮಾಯಲ್ ಆರಿ ಹಾಗೂ ಟಿ.ಐ. ಕಾಲೇಖಾನರಿಗೆ ಅಭಿನಂದನೆಗಳನ್ನು ತಿಳಿಸಿದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಸದಸ್ಯರುಗಳಾದ ಜನಾಬ ಸಯ್ಯದ ಇಸ್ಮಾಯಲ್ ಬಿಜಾಪುರ, ಎರಡೂ ಪ್ರೌಢಶಾಲೆಗಳ ಮುಖ್ಯೋಪಾಧ್ಯಾಯರಾದ ಎಂ.ಎ. ರಿಕಾರ್ಟಿ, ಎಲ್.ಆರ್. ಇಟಗಿ, ಶಿಕ್ಷಕ ವೃಂದ, ಸಿಬ್ಬಂದಿ ವರ್ಗದವರು, ಎಲ್ಲ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಶಿಕ್ಷಕರಾದ ಎಲ್.ಆರ್. ಇಟಗಿ ಸ್ವಾಗತಿಸಿದರು. ಝಡ್.ಎ. ಮುಲ್ಲಾ ನಿರೂಪಿಸಿದರು. ಎಂ.ಎ. ರಿಕಾರ್ಟಿ ವಂದಿಸಿದರು.



ಡಿಜಿಎಂ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯದಿಂದ ಆಯೋಜನೆ

# ರಾಷ್ಟ್ರ ಮಟ್ಟದ ಆಯುರ್ವೇದ ಸಮ್ಮೇಳನ ಜು.5ಕ್ಕೆ




ನರ ದೌರ್ಬಲ್ಯ ರೋಗಗಳು ಕೇವಲ ರೋಗಗಳಲ್ಲಿ ಬದಲಾಗಿ, ಮನುಷ್ಯನ ಮೆದುಳಿನಲ್ಲಿರುವ ನರ ಕೋಶಗಳ ಮೇಲೆ ಪರಿಣಾಮ ಬೀರುವ ನರ ಕೋಶಗಳ ಪ್ರಗತಿಶೀಲ ಕ್ಷೀಣತೆ ಅಥವಾ ಸಾವಿಗೆ ಕಾರಣವಾಗುವ ಹಲವಾರು ಪರಸ್ಥಿತಿಗಳಿಗೆ ಪ್ರಮುಖ ಪದವಾಗಿದೆ. ಇದು ಪ್ರಪಂಚಾದ್ಯಂತ ಲಕ್ಷಾಂತರ ಜನರ ಮೇಲೆ ಪರಿಣಾಮ ಬೀರುತ್ತದೆ. ನರ ದೌರ್ಬಲ್ಯ ಕಾಯಿಲೆಗಳ ಆತ್ಮಹತ್ಯೆ ದೈಹಿಕ ಅಸ್ವಸ್ಥತೆ ಹೆಚ್ಚಿನ ವೆಚ್ಚಗಳು ಮತ್ತು ಕಳಪೆ ಗುಣಮಟ್ಟದ ಜೀವನದೊಂದಿಗೆ ಗಣನಿಯವಾಗಿ ಜಾಗತಿಕ ಆರೋಗ್ಯ ಸಮಸ್ಯೆಯನ್ನುಂಟು ಮಾಡುತ್ತಿದೆ ಎಂದು ಡಾ. ಸಂತೋಷ ಬೆಳವಡಿ ತಿಳಿಸಿದರು.

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಶಿವಾನಂದ ಕಲ್ಯಾಣ ಮಂಟಪದಲ್ಲಿ ಜುಲೈ 5ರಂದು ಬೆಳಗ್ಗೆ 10.30ಕ್ಕೆ ಡಿಜಿಎಂ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ಆಸ್ಪತ್ರೆ ಮತ್ತು ಸ್ನಾತಕೋತ್ತರ ಸಂಶೋಧನಾ ಕೇಂದ್ರದಿಂದ ರಾಷ್ಟ್ರ ಮಟ್ಟದ ಆಯುರ್ವೇದ ಸಮ್ಮೇಳನ 'ಚೈತನ್ಯ' ಹಮ್ಮಿಕೊಳ್ಳಲಾಗಿದೆ ಎಂದು ಮಹಾವಿದ್ಯಾಲಯದ ಪ್ರಾಂಶುಪಾಲ ಡಾ. ಸಂತೋಷ ಬೆಳವಡಿ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಬುಧವಾರ ನಡೆದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿ, ನರ ದೌರ್ಬಲ್ಯ ರೋಗಗಳ ಕುರಿತು ಸಮಗ್ರ ಅಧ್ಯಯನ ವಿಷಯದ ಬಗ್ಗೆ ರಾಷ್ಟ್ರ ಮಟ್ಟದ ಆಯುರ್ವೇದ ಮಹಾ ಸಮ್ಮೇಳನ ಆಯೋಜಿಸಲಾಗಿದೆ. ದೆಹಲಿಯ ರಾಷ್ಟ್ರೀಯ ಆಯುಷ್ ವಿಜ್ಞಾನ ಆಯೋಗ ಆಯುರ್ವೇದ ಮಂಡಳಿಯ ಮಾಜಿ ಅಧ್ಯಕ್ಷ ಡಾ. ಬಿ.ಎಸ್. ಪ್ರಸಾದ ಕಾರ್ಯಕ್ರಮ ಉದ್ಘಾಟಿಸುವರು. ಮಹಾವಿದ್ಯಾಲಯದ ಪ್ರಾಂಶುಪಾಲ ಡಾ. ಸಂತೋಷ ಬೆಳದಡಿ ಸಮ್ಮೇಳನದ ಅಧ್ಯಕ್ಷತೆ ವಹಿಸುವರು. ಜಗದ್ಗುರು ಶಿವಾನಂದ ವಿದ್ಯಾವರ್ಧಕ ಸಂಸ್ಥೆಯ ಕಾರ್ಯದರ್ಶಿ ಬಿ.ಎಸ್. ಪಾಟೀಲ, ನಿವೃತ್ತ ಪ್ರಾಚಾರ್ಯ ಡಾ. ಜಿ.ಬಿ. ಪಾಟೀಲ ಭಾಗವಹಿಸುವರು ಎಂದರು. ಸಮ್ಮೇಳನದಲ್ಲಿ ನುರಿತ ಪ್ರಾಧ್ಯಾಪಕರು, ಚಿಕಿತ್ಸಕರು ಹಾಗೂ ನರ ದೌರ್ಬಲ್ಯ ರೋಗಗಳಿಗೆ ಸಂಬಂಧಪಟ್ಟ ವಿವಿಧ ವಿಷಯಗಳ ಮೇಲೆ ಉಪನ್ಯಾಸಗಳನ್ನು ಮತ್ತು ಪ್ರಬಂಧಗಳನ್ನು ಮಂಡಿಸುವುದರ ಮೂಲಕ ವಿದ್ಯಾರ್ಥಿಗಳಿಗೆ ಹಾಗೂ ಸಂಶೋಧಕರಿಗೆ ಜ್ಞಾನದ ಹರಿವನ್ನು ಹಂಚಲಿದ್ದಾರೆ. ಡಾ. ಮುರಳಿಕೃಷ್ಣ, ಡಾ. ಅಶ್ವಿನಿಕುಮಾರ, ಡಾ. ವೀರಣ್ಣ ಜತ್ತಿ, ವಿನಾಯಕ ಅವರಿಂದ ಉಪನ್ಯಾಸ ಜರುಗಲಿದೆ ಎಂದರು.

ರಾಷ್ಟ್ರ ಮಟ್ಟದ ಆಯುರ್ವೇದ ಮಹಾ ಸಮ್ಮೇಳನಕ್ಕೆ ಕರ್ನಾಟಕ ಹಾಗೂ ಅಂತರ ರಾಜ್ಯಗಳಿಂದ ಸುಮಾರು 50ಕ್ಕೂ ಅಧಿಕ ವಿವಿಧ ಆಯುರ್ವೇದ ಮಹಾವಿದ್ಯಾಲಯಗಳು, ಸಂಘ–ಸಂಸ್ಥೆಗಳು ಹಾಗೂ ಸಂಶೋಧನಾ ಕೇಂದ್ರಗಳಿಂದ ಪ್ರಾಧ್ಯಾಪಕರು, ಸಂಶೋಧಕರು, ವಿಜ್ಞಾನಿಗಳು, ಪಿಎಚ್‌ಡಿ ಮತ್ತು ಸ್ನಾತಕೋತ್ತರ ಹಾಗೂ ಪದವಿ ವಿದ್ಯಾರ್ಥಿಗಳು ಭಾಗವಹಿಸಲಿದ್ದಾರೆ. ಸಮ್ಮೇಳನದಲ್ಲಿ ನರ ದೌರ್ಬಲ್ಯ ರೋಗಗಳ ವಿವಿಧ ವಿಷಯಗಳಿಗೆ ಸಂಬಂಧಿಸಿದ 200ಕ್ಕೂ ಹೆಚ್ಚು ಸಂಶೋಧನಾತ್ಮಕ ಪ್ರಬಂಧಗಳನ್ನು ಮಂಡಿಸಲಿದ್ದಾರೆ. ವಿವಿಧ ರಾಜ್ಯಗಳಿಂದ 500ಕ್ಕೂ ಹೆಚ್ಚು ವಿದ್ಯಾರ್ಥಿಗಳು ಮತ್ತು ಸಂಶೋಧಕರು ಭಾಗವಹಿಸಲಿದ್ದಾರೆ ಎಂದರು. ಪತ್ರಿಕಾಗೋಷ್ಠಿಯಲ್ಲಿ ಡಾ. ದುಗ್ಗಪ್ಪ ಕೊಲ್ಮೆ, ಡಾ. ಬೂದೇಶ ಕನಾಜ, ಡಾ. ಮಲ್ಲಿಕಾರ್ಜುನ, ಡಾ. ಕುಮಾರ ಚೌಡಪ್ಪನವರ ಇದ್ದರು.

# ವಿ.ಪ ಸದಸ್ಯ ರವಿಕುಮಾರ್ ವಿರುದ್ಧ ಕ್ರಮಕ್ಕೆ ಒತ್ತಾಯ



■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರ ಬಗ್ಗೆ ಅವಹೇಳನಕಾರಿ ಹೇಳಿಕೆ ನೀಡಿರುವ ಬಿಜೆಪಿ ವಿಧಾನ ಪರಿಷತ್ ಸದಸ್ಯ ಎನ್.ರವಿಕುಮಾರ್ ಅವರ ಮೇಲೆ ಸೂಕ್ತ ಕಾನೂನು ಕ್ರಮ ಜರುಗಿಸಬೇಕೆಂದು ಆಗ್ರಹಿಸಿ ಕಾಂಗ್ರೆಸ್ ಕಾರ್ಯಕರ್ತರು ನಗರದಲ್ಲಿ ಪ್ರತಿಭಟನೆ ನಡೆಸಿದರು.

ಈ ವೇಳೆ ಮಾತನಾಡಿದ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಂ.ವಿ. ಅಂಜಿನಪ್ಪ, ಶಾಲಿನಿ ರಜನೀಶ್ ಅವರು ಒಬ್ಬ ಐಎಎಸ್ ಅಧಿಕಾರಿ, ಸರ್ಕಾರದ ಮುಖ್ಯ ಕಾರ್ಯದರ್ಶಿ ಎಂಬ ಅರಿವಿಲ್ಲದೇ ಎನ್. ರವಿಕುಮಾರ್ ಅವರು ನಾಲಿಗೆ ಹರಿಬಿಟ್ಟು ಅವರ ಬಗ್ಗೆ ಹಗುರವಾಗಿ ಮಾತನಾಡುವ ಮೂಲಕ ಅವರ ಗೌರವಕ್ಕೆ ಧಕ್ಕೆ ಉಂಟುಮಾಡಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ನಂತರ ಪಟ್ಟಣದ ಪೊಲೀಸ್ ಠಾಣೆಗೆ ತೆರಳಿ ರವಿಕುಮಾರ್ ಅವರ ಹೇಳಿಕೆ ವಿರುದ್ಧ ದೂರು ದಾಖಲಿಸಿದರು. ಪುರಸಭೆ ಸ್ಥಾಯಿ ಸಮಿತಿ ಅಧ್ಯಕ್ಷ ಟಿ. ವೆಂಕಟೇಶ, ಉಪಾಧ್ಯಕ್ಷ ಎಚ್. ಕೊಟ್ರೇಶ್, ಸದಸ್ಯರಾದ ಲಾಟಿ ದಾದಪೀರ, ಜಾಕೀರ್ ಹುಸೇನ್, ಉದ್ದಾರ ಗಣೇಶ, ಮುಖಂಡರಾದ ಬಸವರಾಜ ಸಂಗಪ್ಪನವರ್, ಬಂಡ್ರಿ ಗೋಣಿಬಸಪ್ಪ, ಇಸ್ಮಾಯಿಲ್ ಎಲಿಗಾರ, ಎಚ್. ವಸಂತಪ್ಪ, ಟಿಎಚ್‌ಎಂ ಮಂಜುನಾಥ, ಈಶಪ್ಪ, ಬಿ. ವಾಗೀಶ, ಗುಲಿಕಟ್ಟಿ ಚಂದ್ರಪ್ಪ, ಮೈದೂರು ರಾಮಣ್ಣ, ಮತ್ತೂರು ಬಸವರಾಜ, ಎಚ್.ಟಿ. ಹನುಮಂತ, ಅಲಗಿಲವಾಡದ ವಿಶ್ವನಾಥ, ದೇವೇಂದ್ರಗೌಡ, ಮಾರಪ್ಪ, ಕೊಟೇಪ್ಪ, ಎಲ್. ಮಂಜ್ಯಾನಾಯ್ಕ್, ಜಯಲಕ್ಷ್ಮೀ, ಸುಮಾ ಜಗದೀಶ ಸೇರಿದಂತೆ ಇತರರು ಇದ್ದರು.

ಸಿದ್ಧಾಂತ ಶಿಖಾಮಣಿ ಪ್ರವಚನದಲ್ಲಿ ನರೇಗಲ್ಲ ಶ್ರೀಗಳ ನುಡಿ

# ಮನೆ–ಮನ ಪರಿವರ್ತನೆಗೆ ಪರಿಶುದ್ಧತೆ ಅಗತ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ಮನೆ–ಮನಗಳ ಪರಿವರ್ತನೆ ಮತ್ತು ಪರಿಶುದ್ಧತೆಗೆ ಗ್ರಂಥ, ಹಣತೆ ಮತ್ತು ಪೊರಕೆ ಅವಶ್ಯ ಎಂದು ನರೇಗಲ್ ಹಿರೇಮಠದ ಪೂಜ್ಯ ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮಿಗಳು ಹೇಳಿದರು.

ನಗರದ ಗಾಣಿಗ ಭವನದಲ್ಲಿ ಗದಗ–ಬೆಟಗೇರಿ ಶ್ರೀ ಸಿದ್ಧಾಂತ ಶಿಖಾಮಣಿ ಆಧ್ಯಾತ್ಮಿಕ ಪ್ರವಚನ ಸಮಿತಿ ಶ್ರೀಮದ್ ಕಾಶೀ ನೂತನ ಜಗದ್ಗುರುಗಳವರ ಆಷಾಢ ಮಾಸದ ಇಷ್ಟಲಿಂಗ ಮಹಾಪೂಜೆ ಹಾಗೂ ಶ್ರೀ ಸಿದ್ಧಾಂತ ಶಿಖಾಮಣಿ ಆಧ್ಯಾತ್ಮಿಕ ಪ್ರವಚನದಲ್ಲಿ ಶ್ರೀಗಳು ಆಶೀರ್ವಚನ ನೀಡುತ್ತಿದ್ದರು.




ಪ್ರತಿಯೊಬ್ಬರ ಜೀವನದಲ್ಲಿ ಗ್ರಂಥಗಳು ಮಾರ್ಗದರ್ಶಿಗಳಾಗಿವೆ. ಜ್ಞಾನದ ದಿಗಂತವನ್ನು ಹೆಚ್ಚಿಸುವ ಮೂಲಕ ಸನ್ಮಾರ್ಗದಲ್ಲಿ ಮುನ್ನಡೆದು ಜೀವನ್ಮುಕ್ತಿಗೆ ಸಾಧನವಾಗಿವೆ. ಹಣತೆ ಚಿಕ್ಕ ಗುಡಿಸಲಿನಲ್ಲಿಯೂ ತನ್ನದೇ ಆದ ಪ್ರಕಾಶವನ್ನು ಬೀರಿ, ಮನೆ–ಮನದ ಅಂಧಕಾರವನ್ನು ತೊಡೆದು ಹಾಕಿ ಬದುಕಿನ ಬೆಳಕನ್ನು ಅಭಿವ್ಯಕ್ತಿಗೊಳಿಸುವ ಸಂಕೇತವಾಗಿದೆ. ದೀಪಾವಳಿ, ದೀಪಾರಾಧನೆ ಜ್ಞಾನ ಮತ್ತು ಬೆಳಕಿನ ಪ್ರತೀಕವಾಗಿವೆ ಎಂದರು.

ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ದಯಪಾಲಿಸಿದ ಜಂಗಮವಾಡಿಮಠ ವಾರಣಾಸಿ ಕಾಶೀ ಮಹಾಪೀಠದ ಜ. ಡಾ. ಮಲ್ಲಿಕಾರ್ಜುನ ವಿಶ್ವಾರಾಧ್ಯ ಶಿವಾಚಾರ್ಯ ಭಗವತ್ಪಾದಂಗಳವರು, ಸಂಸ್ಕೃತ ಮತ್ತು ಕನ್ನಡ ಭಾಷೆ ಅತ್ಯಂತ ಪ್ರಭಾವಶಾಲಿ ಮತ್ತು ಗಟ್ಟಿತನವುಳ್ಳ ಭಾಷೆಯಾಗಿದೆ ಎಂಬುದನ್ನು ಇದುವರೆಗೆ ಪ್ರಕಟಗೊಂಡಿರುವ ಮಹಾನ್ ಗ್ರಂಥಗಳೇ ಸಾಬೀತುಪಡಿಸಿವೆ ಎಂದರು. ಸಮಾರಂಭದಲ್ಲಿ ಜೀಗೇರಿ ಮತ್ತು ನರಸಾಪೂರ ಮಠದ ಸ್ವಾಮೀಜಿ ಉಪಸ್ಥಿತರಿದ್ದರು. ಗಣ್ಯರಾದ ಆರ್.ಎ. ರಬ್ಬನಗೌಡ್ರ, ವ್ಹಿ.ಸಿ. ಧನ್ನೂರಹಿರೇಮಠ, ಎಸ್.ಎಚ್. ಶಿವನಗೌಡ್ರ, ಚಂದ್ರು ಹಿರಯಾಳಮಠ, ಜಯದೇವ ಮೆಣಸಗಿ, ಶಂಭು ಪಟ್ಟದಕಲ್ಲ, ರಾಜಶೇಖರ ವಸ್ತ್ರದ, ಡಾ. ಶಿವಾನಂದಯ್ಯ ಹಿರೇಮಠ, ಮೃತ್ಯುಂಜಯ ಸಂಕೇಶ್ವರ, ಕಿರಣ ಭೂಮಾ, ಆರ್.ಕೆ. ಮಠದ, ಬಸವರಾಜ ಗಣಾಚಾರಿ ಅವರನ್ನು ಪೂಜ್ಯರು ಸನ್ಮಾನಿಸಿ ಆಶೀರ್ವದಿಸಿದರು.

ಸುವರ್ಣಾ ಹೊಸಂಗಡಿ ಪ್ರಾರ್ಥಿಸಿದರು. ಶಿವಾನಂದಯ್ಯ ಹಿರೇಮಠ ಸ್ವಾಗತಿಸಿದರು. ವ್ಹಿ.ಕೆ. ಗುರುಮಠ ನಿರೂಪಿಸಿ ವಂದಿಸಿದರು.

# ನಗರಸಭೆಯಾದ ಹರಪನಹಳ್ಳಿ: ಸಂಭ್ರಮಾಚರಣೆ



■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ನಗರಸಭೆಯಾಗಬೇಕೆಂಬ ಬಹುದಿನಗಳ ಕನಸು ನನಸಾಗಿದ್ದು, ಇದಕ್ಕೆ ಶ್ರಮಿಸಿದ ಎಲ್ಲರಿಗೂ ಧನ್ಯವಾದಗಳು ಎಂದು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಂ.ವಿ. ಅಂಜಿನಪ್ಪ ಸಂತಸ ವ್ಯಕ್ತಪಡಿಸಿದರು.

ಹರಪನಹಳ್ಳಿ ಪಟ್ಟಣದ ಪುರಸಭೆ ಮುಂಭಾಗದಲ್ಲಿ ಬುಧವಾರ ಸಂಜೆ ಪುರಸಭೆಯಿಂದ ನಗರಸಭೆಯಾಗಿ ಮುಂಬಡ್ತಿ ಪಡೆದಿದ್ದಕ್ಕಾಗಿ ಹಮ್ಮಿಕೊಂಡಿದ್ದ ಸಂಭ್ರಮಾಚರಣೆಯಲ್ಲಿ ಅವರು ಮಾತನಾಡಿದರು.

ಯಾವುದೇ ಕೆಲಸ–ಕಾರ್ಯಗಳು ಸಿದ್ಧಿಯಾಗಲು ನಿರಂತರ ಪರಿಶ್ರಮ ಬೇಕು. ಶಾಸಕಿ ಎಂ.ಪಿ. ಲತಾ ಮಲ್ಲಿಕಾರ್ಜುನ ಹಾಗೂ ದಾವಣಗೆರೆ ಸಂಸದರ ಇಚ್ಛಾಶಕ್ತಿಯಿಂದ ಸರ್ಕಾರದ ಮನವೊಲಿಸುವಲ್ಲಿ ಯಶಸ್ವಿಯಾಗಿದ್ದರ ಪರಿಣಾಮ ಇಂದು ಪಟ್ಟಣ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳು ಇದರ ವ್ಯಾಪ್ತಿಗೆ ಒಳಪಡಬಹುದಾಗಿದೆ ಎಂದರು.

ಪುರಸಭೆ ಮುಖ್ಯಾಧಿಕಾರಿ ಎರಗುಡಿ ಶಿವಕುಮಾರ್ ಮಾತನಾಡಿ, ಹರಪನಹಳ್ಳಿ ಪುರಸಭೆಯ ಸರಹದ್ದನ್ನೇ ನಗರಸಭೆಯನ್ನಾಗಿ ಮುಂಬಡ್ತಿ ಹೊಂದಿಸಲಾಗಿದ್ದು, ನಗರಸಭೆಯ ವ್ಯಾಪ್ತಿಗೆ ಬರಲು ಇಚ್ಛಿಸುವ ಗ್ರಾಮಗಳು ಕೂಡ ನಗರಸಭೆಗೆ ಸಿಗುವ ಮೂಲಭೂತ ಸೌಕರ್ಯಗಳನ್ನು ಪಡೆಯಬಹುದಾಗಿದೆ ಎಂದರು.

ನಗರದ ಆಸ್ತಿ ತೆರಿಗೆ, ಖಾತಾ ವರ್ಗಾವಣೆ ಶುಲ್ಕ, ನೀರಿನ ತೆರಿಗೆ, ಘನತ್ಯಾಜ್ಯ ವಸ್ತು ನಿರ್ವಹಣೆ ಶುಲ್ಕಗಳು ಹೆಚ್ಚಳವಾಗಲಿದೆ. ಇದರಿಂದ ನಗರದ ಅಭಿವೃದ್ಧಿಗೆ ಹಣ ಉತ್ತಮವಾಗಿ ಕ್ರೋಢೀಕರಣಗೊಳ್ಳಲಿದೆ ಎಂದರು.

ಪುರಸಭೆ ಅಧ್ಯಕ್ಷೆ ಫಾತೀಮಾಭಿ, ಉಪಾಧ್ಯಕ್ಷ ಕೊಟ್ರೇಶ್, ಪುರಸಭೆ ಮಾಜಿ ಅಧ್ಯಕ್ಷ ಹರಾಳು ಅಶೋಕ್, ಪುರಸಭೆ ಸದಸ್ಯರಾದ ಇಜಂತ್ಕರ್ ಮಂಜುನಾಥ, ಕಿರಣ್ ಶಾನಭಾಗ, ಜಾವೇದ್, ಜಾಕೀರ್, ರೊಕ್ಕಪ್ಪ, ಸುಮಾ ಜಗದೀಶ್, ನಾಮನಿರ್ದೇಶನ ಸದಸ್ಯರು ವಸಂತಪ್ಪ, ಗುಡಿ ನಾಗರಾಜ, ಸುಮಾ ಜಗದೀಶ್, ಮುಖಂಡರಾದ ಹುಲಿಕಟ್ಟಿ ಚಂದ್ರಪ್ಪ, ಮೈದೂರು ರಾಮಣ್ಣ, ಬಸವರಾಜ್ ಸಂಗಪ್ಪನವರ, ಇಸ್ಮಾಯಿಲ್ ಎಲಿಗಾರ, ಡಂಕಿ ವಾಸೀಮ್, ಶಶಿಕುಮಾರ್ ನಾಯ್ಕ, ಎನ್. ಶಂಕರ್, ಓ. ಮಹಾಂತೇಶ್, ವಾಗೀಶ್ ಮುಂತಾದವರಿದ್ದರು.

## ಅಂಗಡಿ, ವಾಣಿಜ್ಯ ಸಂಸ್ಥೆಗಳ ಮಾಲೀಕರ, ಉದ್ದಿಮೆದಾರರ ಗಮನಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ–ಬೆಟಗೇರಿ ನಗರಸಭೆ ವ್ಯಾಪ್ತಿಯಲ್ಲಿರುವ ಎಲ್ಲಾ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳು ಕರ್ನಾಟಕ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳ ಕಾಯ್ದೆ 1961 ಹಾಗೂ ನಿಯಮಗಳು–1963ರ ಅಡಿಯಲ್ಲಿ ನೋಂದಣಿ ಮಾಡಿಸಿಕೊಳ್ಳುವುದು ಕಡ್ಡಾಯವಾಗಿದೆ.

ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳ ಮಾಲೀಕರು ಹಾಗೂ ಉದ್ದಿಮೆದಾರರು ಈಗಾಗಲೇ ತಮ್ಮ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳನ್ನು ಕಾರ್ಮಿಕ ನಿರೀಕ್ಷಕರ ಕಚೇರಿ ಗದಗ 2ನೇ ವೃತ್ತ, ಗದಗ ಇಲ್ಲಿ ನೋಂದಣಿ ಮಾಡಿಸಿಕೊಂಡ ಸಂಸ್ಥೆಗಳನ್ನು ಹೊರತುಪಡಿಸಿ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳಲ್ಲಿ ಕಾರ್ಮಿಕರು ಇರುವ ಹಾಗೂ ಕಾರ್ಮಿಕರು ಇಲ್ಲದೇ ಇರುವ ಸಂಸ್ಥೆಗಳು ಸಹ ಕರ್ನಾಟಕ ಸರ್ಕಾರದ ಇ–ಕಾರ್ಮಿಕ ತಂತ್ರಾಂಶದಲ್ಲಿ https://www.ekarmika.karnataka.gov.in/ekarmika/static/Home-aspx ನಿಗದಿತ ಆನ್‌ಲೈನ್ ಮೂಲಕ ಶುಲ್ಕ ಮತ್ತು ಅವಶ್ಯಕ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸಿ ಸಂಸ್ಥೆಗಳ ನೋಂದಣಿ ಪತ್ರ ಪಡೆದುಕೊಳ್ಳಬೇಕು.

ಇಲ್ಲವಾದಲ್ಲಿ ಕಾನೂನು ಕ್ರಮ ಕೈಗೊಳ್ಳಲಾಗುವುದೆಂದು ಕಾರ್ಮಿಕ ನಿರೀಕ್ಷಕರಾದ ಉಮೇಶ್ ಎಸ್ ಹುಲ್ಲಣ್ಣವರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರಕೃತಿಯನ್ನು ಉಳಿಸಿ ಭವಿಷ್ಯವನ್ನು ಬೆಳಗಿಸಿ

■ವಿಜಯಸಾಕ್ಷಿ ಸುದ್ದಿ, ಗದಗ



ಪರಿಸರ ರಕ್ಷಣೆ ನಮ್ಮೆಲ್ಲರ ಹೊಣೆ. ಅದನ್ನು ಕಾಪಾಡಿಕೊಂಡು ಹೋಗುವುದು ನಮ್ಮೆಲ್ಲರ ಆದ್ಯ ಕರ್ತವ್ಯ. ಪ್ರಕೃತಿಯ ಮಡಿಲು ತಾಯಿಯ ಮಡಿಲಿಗೆ ಸಮಾನ. ಈ ತಾಯಿಯ ಮಡಿಲನ್ನು ತಂಪಾಗಿಸುವುದು ನಮ್ಮೆಲ್ಲರ ಕರ್ತವ್ಯ ಎಂದು ಮಲ್ಲಿಕಾರ್ಜುನ್ ಪೂಜಾರ ಹೇಳಿದರು.

ಹುಲಕೋಟಿ ಸಹಕಾರಿ ಶಿಕ್ಷಣ ಸಂಸ್ಥೆಯ ಪ್ರೌಢಶಾಲೆ ಹರ್ತಿಯಲ್ಲಿ ಪರಿಸರ ದಿನಾಚರಣೆ ನಿಮಿತ್ತ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಯೋಜನೆಯ ಸಹಯೋಗದೊಂದಿಗೆ ಆಯೋಜಿಸಿದ್ದ ಪರಿಸರ ಜಾಗೃತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಅಧ್ಯಕ್ಷತೆ ವಹಿಸಿದ್ದ ಎಸ್.ಬಿ. ಕಣಗಿನಹಾಳ ಮಾತನಾಡಿ, ಪ್ರಕೃತಿ ನಮಗೆ ಏನು ಕೊಟ್ಟಿತು ಎಂಬುದಕ್ಕಿಂತ ಅದಕ್ಕೆ ನಾವು ಏನು ಕೊಟ್ಟೆವು ಎಂಬುದನ್ನು ವಿದ್ಯಾರ್ಥಿಗಳಿಗೆ ಮನಮುಟ್ಟುವಂತೆ ಅರ್ಥೈಸಿದರು.

ಮುಖ್ಯ ಅತಿಥಿಗಳಾಗಿ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮೀಣ ಯೋಜನೆ ಬಿಸಿ ಟ್ರಸ್ಟ್‌ನ ಯೋಜನಾಧಿಕಾರಿ ಉಮಾ ಎನ್.ಜಿ ಪಾಲ್ಗೊಂಡಿದ್ದರು. ಕಿರಣ್ ಮಹೇಂದ್ರಕರ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಪ್ರಶಿಕ್ಷಣಾರ್ಥಿ ರಾಜೇಶ್ವರಿ ಜಕ್ಕನಗೌಡ ಸ್ವಾಗತಿಸಿದರು. ಪ್ರಶಿಕ್ಷಣಾರ್ಥಿ ಅಶ್ವಿನಿ ದೇಸಾಯಿ ನಿರೂಪಿಸಿದರು. ಪ್ರಶಿಕ್ಷಣಾರ್ಥಿ ವಿರೇಶ, ಶಾಲಾ ಮುಖ್ಯೋಪಾಧ್ಯಾಯರು, ಶಿಕ್ಷಕ ವೃಂದದವರು, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ಮದುವೆಯಾದ ರಾತ್ರಿಯೇ ನವವಿವಾಹಿತ ಸಾವು!

■ವಿಜಯಸಾಕ್ಷಿ ಸುದ್ದಿ, ಕೋಲಾರ

ಪ್ರೀತಿ ಮಾಡಿದ ಯುವತಿಯನ್ನು ಸಬ್ ರಿಜಿಸ್ಟರ್ ಕಚೇರಿಯಲ್ಲಿ ಮದುವೆಯಾಗಿದ್ದ ಯುವಕ ಅಂದಿನ ರಾತ್ರಿಯೇ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಕೋಲಾರದಲ್ಲಿ ಜರುಗಿದೆ.

ಹರೀಶ್ ಬಾಬು (33) ನೇಣಿಗೆ ಶರಣಾದ ಯುವಕ. ಈತ ಕಳೆದ 8 ವರ್ಷಗಳಿಂದ ಕೋಲಾರ ಜಿಲ್ಲಾಸ್ಪತ್ರೆಯಲ್ಲಿ ಡೇಟಾ ಆಪರೇಟರ್ ಆಗಿ ಕೆಲಸ ಮಾಡುತ್ತಿದ್ದರು.

ಕಳೆದ ಮೂರು ದಿನಗಳಿಂದ ರಜೆಯಲ್ಲಿದ್ದ ಹರೀಶ್ ಬಾಬು, ಬುಧವಾರ ಬೆಳಿಗ್ಗೆ ರಿಜಿಸ್ಟಾರ್ ಮ್ಯಾರೇಜ್ ಆಗಿದ್ದರು. ಆದರೆ ಅದೇ ದಿನ ರಾತ್ರಿ 11:30ರ ಸುಮಾರಿಗೆ ಆಸ್ಪತ್ರೆಯ ಇಎನ್‌ಟಿ ವಿಭಾಗದ ಕೊಠಡಿಯ ಕಿಟಕಿಗೆ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಹೀಗಾಗಿ ಹಲವು ಅನುಮಾನಗಳಿಗೆ ದಾರಿ ಮಾಡಿಕೊಟ್ಟಿದೆ.

ಈ ಕುರಿತು ಮೃತ ಹರೀಶ್ ಬಾಬು ತಾಯಿ ಮಾತನಾಡಿ, ಒಂದು ತಿಂಗಳ ಹಿಂದೆ ಯುವತಿಯೊಬ್ಬಳು ನಮ್ಮ ಮನೆಗೆ ಬಂದು ನಾನು ಹಾಗೂ ಹರೀಶ್ ಮದುವೆಯಾಗುತ್ತೇವೆ ಎಂದಳು. ಅದಕ್ಕೆ ಕೆಲ ದಿನಗಳ ನಂತರ ನಾನೇ ಮಾಡುತ್ತೇನೆ ಎಂದು ಹೇಳಿದ್ದೆ. ಆದರೆ ಬುಧವಾರ ಬೆಳಿಗ್ಗೆ ಯುವತಿ ಕಡೆಯವರು ಬಂದು ನನ್ನ ಮಗನನ್ನು ಬಲವಂತವಾಗಿ ಎಳೆದುಕೊಂಡು ಹೋಗಿ ಮದುವೆ ಮಾಡಿಸಿದ್ದಾರೆ ಎಂದು ತಿಳಿಸಿದರು.

ಮೃತ ಹರೀಶ್ ಬುಧವಾರ ರಾತ್ರಿ 11:15ರ ಸುಮಾರಿಗೆ ಆಸ್ಪತ್ರೆಯೊಳಗೆ ಹೋಗಿರುವುದು ಸಿಸಿಟಿವಿಯಲ್ಲಿ ಸೆರೆಯಾಗಿದ್ದು, ಮದ್ಯ ಸೇವನೆ ಮಾಡಿ ಆತ್ಮಹತ್ಯೆಗೆ ಶರಣಾಗಿದ್ದಾರೆ ಎನ್ನಲಾಗಿದೆ. ಸದ್ಯ ಕೋಲಾರ ನಗರ ಪೊಲೀಸ್ ಠಾಣೆಯಲ್ಲಿ ಅನುಮಾನಾಸ್ಪದ ಸಾವು ಎಂದು ಪ್ರಕರಣ ದಾಖಲಾಗಿದ್ದು, ತನಿಖೆ ಮುಂದುವರಿದಿದೆ.

# ರಾಷ್ಟ್ರೀಯ ವೈದ್ಯರ ದಿನಾಚರಣೆ

■ವಿಜಯಸಾಕ್ಷಿ ಸುದ್ದಿ, ಗದಗ




ಪರಿವರ್ತನಾ ಜನಸೇವಾ ಸಂಸ್ಥೆಯು ನಡೆಸುತ್ತಿರುವ ಸಂಸ್ಕಾರ–ವ್ಯಸನ ಮುಕ್ತಿ ಹಾಗೂ ಪುನರ್ವಸತಿ ಕೇಂದ್ರದಲ್ಲಿ ರಾಷ್ಟ್ರೀಯ ವೈದ್ಯರ ದಿನಾಚರಣೆ ಹಾಗೂ ಪತ್ರಿಕಾ ದಿನಾಚರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.


ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಡಾ. ಭರತ ಬಿಡನಾಳ ಮಾತನಾಡಿ, ಕೇವಲ ದೈಹಿಕವಾಗಿ ಆರೋಗ್ಯವಿದ್ದರೆ ಆರೋಗ್ಯವಲ್ಲ. ದೈಹಿಕವಾಗಿ, ಮಾನಸಿಕವಾಗಿ, ಸಾಮಾಜಿಕವಾಗಿಯೂ ಆರೋಗ್ಯವಾಗಿರಬೇಕು.

ಅತಿಥಿಗಳಾಗಿ ಆಗಮಿಸಿದ್ದ ಪತ್ರಕರ್ತ ವೆಂಕಟೇಶ ಇಮ್ರಾಪುರ ಮಾತನಾಡಿ, ವೈದ್ಯರು ಹಗಲಿರುಳು ಕರ್ತವ್ಯ ನಿರ್ವಹಿಸುತ್ತಾರೆ. ವಿಶೇಷವಾಗಿ ಸಾಂಕ್ರಾಮಿಕ ರೋಗಗಳು ಅಥವಾ ಆರೋಗ್ಯ ಬಿಕ್ಕಟ್ಟಿನ ಸಮಯದಲ್ಲಿ ತಮ್ಮ ಪ್ರಾಣವನ್ನು ಪಣಕ್ಕಿಡುತ್ತಾರೆ. ಕೆಲಸದ ಹಾಗೂ ಮಾನಸಿಕ ಒತ್ತಡವನ್ನೂ ಸಹಿಸಿಕೊಂಡು ಕಾರ್ಯವನ್ನು ನಿರ್ವಹಿಸುತ್ತಾರೆ ಎಂದು ತಿಳಿಸಿದರು. ಇನ್ನೋರ್ವ ಅತಿಥಿ ಕರ್ನಾಟಕ ಬಾಲವಿಕಾಸ ಅಕಾಡೆಮಿಯ ಮಾಜಿ ಸದಸ್ಯ ರಮೇಶ ಸಜ್ಜಗಾರ ಮಾತನಾಡಿ, ಪ್ರಾಚೀನ ಕಾಲದಿಂದಲೂ ನಮ್ಮ ಹಿರಿಯರು ನಾಟಿ ಔಷಧಿಗಳನ್ನು ಬಳಸಿ ರೋಗದಿಂದ ಗುಣಮುಖರಾಗುತ್ತಿದರು. ನಳಂದ, ತಕ್ಷಶಿಲಾ ವಿಶ್ವವಿದ್ಯಾಲಯಗಳು ಜ್ಞಾನ ಭಂಡಾರಗಳನ್ನು ಹೊಂದಿದ್ದವು ಎಂದರು.

ಕಾರ್ಯಕ್ರಮದಲ್ಲಿ ಆಡಳಿತಾಧಿಕಾರಿ ಮಲ್ಲಗೌಡ ತಂಗಡಿ, ಪ್ರತಿಭಾ ತಂಗಡಿ ಉಪಸ್ಥಿತರಿದ್ದರು.

ವೀರೇಶ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಸುಜಾತ ಸ್ವಾಗತಿಸಿದರು. ಕಿರಣ್‌ಕುಮಾರ್ ನಿರೂಪಿಸಿದರು. ಭಾರತಿ ಅವರು ಸಂಸ್ಥೆಯಲ್ಲಿ ದೊರೆಯುವ ಸೌಲಭ್ಯಗಳ ಬಗ್ಗೆ ತಿಳಿಸಿಕೊಟ್ಟರು. ಸಿಬ್ಬಂದಿಗಳಾದ ಅಜಿತ್ ದೇವಪ್ಪ ಮತ್ತು ಚಿಕಿತ್ಸಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು.

# ಭಾರತೀಯ ಸೇನೆಗೆ ಆಯ್ಕೆ; ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಭಾರತಾಂಬೆಯ ಸೇವೆ ಮಾಡಲು ನಮ್ಮ ತನು, ಮನ, ಧನ ಅರ್ಪಿಸಿಕೊಳ್ಳುವುದು ಅವಶ್ಯಕವೆಂದು ಅಂಜುಮನ್ ಇಸ್ಲಾಂ ಕಮಿಟಿ ಮಾಜಿ ಕಾರ್ಯದರ್ಶಿ ಮಾಸುಮಲಿ ಮದಗಾರ ಹೇಳಿದರು.

ಸ್ಥಳೀಯ ಕಟ್ಟಿಬಸವೇಶ್ವರ ರಂಗಮಂದಿರ ನಿವಾಸಿ ಸಂಗಪ್ಪ ವಡಗೇರಿ ಇವರ ಮೊಮ್ಮಗ ಆಕಾಶ ಕವಡಿಮಟ್ಟಿ ಭಾರತೀಯ ಸೇನೆಗೆ ನೇಮಕಗೊಂಡಿರುವ ನಿಮಿತ್ತ ಅವರನ್ನು ಕುಟುಂಬ ಸಹಿತವಾಗಿ ಸನ್ಮಾನಿಸಿ ಮಾತನಾಡಿದರು.

ಭಾರತೀಯ ಸೇನೆಗೆ ಸೇರಲು ಅನೇಕ ಯುವಕರು ವರ್ಷಾನುಗಟ್ಟಲೆ ಸಾಕಷ್ಟು ಕಷ್ಟಪಡುತ್ತಾರೆ. ಭಾರತಾಂಬೆಯ ಸೇವೆ ಮಾಡಲು ಪೂರ್ವಜರ ಆಶೀರ್ವಾದ ಹಾಗೂ ಸ್ವಂತ ಶ್ರಮ ಅಗತ್ಯ. ಯುವಕರು ದೈಹಿಕವಾಗಿ, ಮಾನಸಿಕವಾಗಿ ಸದಾ ತಾಯ್ನಾಡಿನ ಸೇವೆ ಮಾಡಲು ಮುಂದಾಗಬೇಕು ಎಂದರು.

ಈ ಸಂದರ್ಭದಲ್ಲಿ ಕಮಿಟಿಯ ಮಾಜಿ ಕಾರ್ಯದರ್ಶಿ ದಾವಲಸಾಬ ತಾಳಿಕೋಟಿ ಸೇರಿದಂತೆ ಮದಗಾರ ಕುಟುಂಬದ ಸದಸ್ಯರು ಇದ್ದರು.

# ವೈದ್ಯ ವೃತ್ತಿ ಅತ್ಯಂತ ಪವಿತ್ರ



**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯಿಂದ ವೈದ್ಯ ದಿನಾಚರಣೆ ಹಿನ್ನೆಲೆಯಲ್ಲಿ ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ಶ್ರೀಕಾಂತ ಕಾಟೇವಾಲೆ ಸೇರಿ ವೈದ್ಯರನ್ನು ಗೌರವಿಸಲಾಯಿತು.

ಈ ವೇಳೆ ಮಾತನಾಡಿದ ತಾಲೂಕಾ ಗ್ಯಾರಂಟಿ ಸಮಿತಿ ಅಧ್ಯಕ್ಷ ನಾಗರಾಜ ಮಡಿವಾಳರ, ವೈದ್ಯ ವೃತ್ತಿ ಅತ್ಯಂತ ಪವಿತ್ರವಾಗಿದೆ. ವೈದ್ಯರು ತಮ್ಮ ಬದುಕಿನ ಜಂಜಾಟಗಳು, ಒತ್ತಡ, ಸ್ವಾರ್ಥ, ಕೌಟುಂಬಿಕ ಬದುಕಿನ ಕಷ್ಟ-ಸುಖಗಳನ್ನು ಬದಿಗೊತ್ತಿ ಜೀವ ಉಳಿಸುವ ಕಾರ್ಯ ಮಾಡುತ್ತಾರೆ. ಮುಖ್ಯವಾಗಿ ಸರ್ಕಾರಿ ಆಸ್ಪತ್ರೆಯಲ್ಲಿ ಸೇವೆ ಸಲ್ಲಿಸುವ ವೈದ್ಯರ ತಾಳ್ಮೆ, ಸಹನೆ, ಕಾರ್ಯಕ್ಷಮತೆ ಪ್ರಶಂಸನೀಯ. ಸಮಾಜ ವೈದ್ಯರನ್ನು ಗೌರವದಿಂದ ಕಾಣಬೇಕು ಎಂದರು.

ವೈದ್ಯರಾದ ಡಾ. ಉಮೇಶ ಕೆಳಮನೆ, ಡಾ. ಪ್ರವೀಣ ಸಜ್ಜನರ, ಡಾ. ಬಿಸ್ಮಿಲ್ಲಾ ಗೌರವ ಸ್ವೀಕರಿಸಿದರು. ತಿಪ್ಪಣ್ಣ ಸಂಶಿ, ಕಲ್ಲಪ್ಪ ಗಂಗಣ್ಣವರ, ಹನಮಂತ ಹರಿಜನ, ಜಗದೀಶ ಹುಲಗೆಮ್ಮನವರ, ಭರಮಗೌಡ ರೊಟ್ಟಿಗವಾಡ, ದಾದಾಪೀರ ಮುಚ್ಚಾಲೆ, ಗಿರೀಶ ಕಲ್ಮಠ, ಕಾರ್ತಿಕ ದೊಡ್ಡಮನಿ, ಮಾಲತೇಶ ಗುಡಸಲಮನಿ, ಫಕ್ಕೀರೇಶ ಭಜಕ್ಕನವರ, ನೀಲಪ್ಪ ಬಸಾಪುರ, ಗುಡ್ಡಪ್ಪ ಮತ್ತೂರ ಇದ್ದರು.

**ಸಿದ್ಧಾಂತ ಶಿಖಾಮಣಿ ಆಧ್ಯಾತ್ಮಿಕ ಪ್ರವಚನ ಮಾಲಿಕೆಯಲ್ಲಿ ಕಾಶೀ ಶ್ರೀಗಳ ಅಭಿಮತ**

# ಧಾರ್ಮಿಕ ಗ್ರಂಥಗಳು ಮನುಕುಲದ ಒಳಿತು ಬಯಸಿವೆ

**■ ವಿಜಯಸಾಕ್ಷಿ ಸುದ್ದಿ, ಗದಗ**

ವೇದಗಳ ತತ್ವ-ಸಂದೇಶಗಳ ತಳಹದಿಯ ಮೇಲೆ ರಚನೆಗೊಂಡ ಎಲ್ಲ ಧಾರ್ಮಿಕ ಗ್ರಂಥಗಳು ಮನುಕುಲದ ಒಳಿತನ್ನು ಬಯಸಿವೆ ಎಂದು ಜಂಗಮವಾಡಿಮಠ ವಾರಣಾಸಿ ಕಾಶೀ ಮಹಾಪೀಠದ ಶ್ರೀಮತ್ ಕಾಶೀ ಜ್ಞಾನಸಿಂಹಾಸನಾಧೀಶ್ವರ ಜ. ಡಾ. ಮಲ್ಲಿಕಾರ್ಜುನ ವಿಶ್ವಾರಾಧ್ಯ ಶಿವಾಚಾರ್ಯ ಭಗವತ್ಪಾದಂಗಳವರು ಹೇಳಿದರು.

ಅವರು ಬುಧವಾರ ನಗರದ ಗಾಣಿಗ ಭವನದಲ್ಲಿ ಗದಗ-ಬೆಟಗೇರಿ ಶ್ರೀ ಸಿದ್ಧಾಂತ ಶಿಖಾಮಣಿ ಆಧ್ಯಾತ್ಮಿಕ ಪ್ರವಚನ ಸಮಿತಿ ಹಮ್ಮಿಕೊಂಡಿರುವ ಆಷಾಢ ಮಾಸದ ಇಷ್ಟಲಿಂಗ ಮಹಾಪೂಜೆ ಹಾಗೂ ಶ್ರೀ ಸಿದ್ಧಾಂತ ಶಿಖಾಮಣಿ ಆಧ್ಯಾತ್ಮಿಕ ಪ್ರವಚನ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದರು.



ಮನುಕುಲಕ್ಕೆ ಉಪದೇಶ ಮಾಡುವ ಸಿದ್ಧಾಂತ ಶಿಖಾಮಣಿ ಪವಿತ್ರ ಗ್ರಂಥವನ್ನು ವೀರಶೈವ ಧರ್ಮಗ್ರಂಥ ಎಂದು ಬಣ್ಣಿಸಲಾಗಿದ್ದರೂ ಅದು ವೀರಶೈವರಿಗೆ ಅಷ್ಟೇ ಸೀಮಿತವಾಗಿಲ್ಲ. ಎಲ್ಲ ಧರ್ಮದವರಿಗೂ ಒಳ್ಳೆಯ ಸಂದೇಶ ನೀಡಿ ಮಾರ್ಗದರ್ಶಿ ಆಗಬಲ್ಲ ಗ್ರಂಥವಾಗಿದೆ ಎಂದು ಬಣ್ಣಿಸಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ನರೇಗಲ್ ಹಿರೇಮಠದ ಪೂಜ್ಯ ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮಿಗಳು, ಮನುಷ್ಯನನ್ನು ಉನ್ನತ ಸ್ಥಾನಕ್ಕೆ ಕೊಂಡೊಯ್ಯುವ, ಮನುಷ್ಯನ ಮನೋಸ್ಥಿತಿಯನ್ನು ದೈವತ್ವದೆಡೆಗೆ ಸಾಗಿಸುವ ಸನಾತನ ಧರ್ಮ ಗ್ರಂಥ ಸಿದ್ಧಾಂತ ಶಿಖಾಮಣಿಯಾಗಿದೆ ಎಂದರು.

ಡಾ. ಶೇಖರ ಸಜ್ಜನರ ಹಾಗೂ ಕೆಎಸ್‌ಆರ್‌ಟಿಸಿ ಉಪಾಧ್ಯಕ್ಷ ಪೀರಸಾಬ ಕೌತಾಳ ಅವರು ಧರ್ಮ, ದೇವರು, ಭಕ್ತಿ ಹಾಗೂ ಭಾರತೀಯ ಸಂಸ್ಕೃತಿ, ಪರಂಪರೆ ಕುರಿತು ಮಾತನಾಡಿದರು. ಅತಿಥಿಗಳಾಗಿ ಹಾಲಪ್ಪ ಬಣವಿ, ತೋಟಪ್ಪ ಗಾಣಿಗೇರ, ಅಶೋಕ ಮಂದಾಲಿ, ಗಿರಿಯಪ್ಪ ಅಸೂಟಿ, ಸುರೇಶ ಮರಳಪ್ಪನವರ, ಬಿ.ಎಸ್. ವಡ್ಡಟ್ಟಿ, ಬಸವಂತಪ್ಪ ನ್ಯಾವಳ್ಳಿ, ಈಶಪ್ಪ ಕಿರೇಸೂರ, ಗಂಗಾಧರ ಗಾಣಿಗೇರ, ರಮೇಶ ಮಂದಾಲಿ, ಶಿವಣ್ಣ ಹಿಟ್ನಳ್ಳಿ, ಎಸ್.ವ್ಹಿ. ಪವಾಡಿಗೌಡ್ರ, ಸೋಮನಗೌಡ ಪಾಟೀಲ ಆಗಮಿಸಿದ್ದರು.

ಪ್ರಶಾಂತ ಶಾಬಾದಿಮಠ, ಸಂತೋಷ ಅಬ್ಬಿಗೇರಿ, ಜ್ಯೋತಿ ಚಳಗೇರಿ, ಉಮಾಪತಿ ಭೂಸನೂರಮಠ, ಮಹಾಂತೇಶ ಮುಧೋಳ, ಗಿರಿಜಮ್ಮ ಅಬ್ಬಿಗೇರಿ, ಶಂಕರಗೌಡ ಸಂಕನಗೌಡರ, ಡಾ.ವಾಣಿ ಶಿವಪೂರ, ಶೈಲಾ ಹಿರೇಮಠ, ಗುರುಸ್ವಾಮಿಮಠ, ಶಾರದಾ ತಡಸದ ಸೇರಿದಂತೆ ಅತಿಥಿಗಳನ್ನು ಪೂಜ್ಯರು ಸನ್ಮಾನಿಸಿ ಗೌರವಿಸಿದರು.

ದೀಪ್ತಿ ಪಾಠಕ ಅವರಿಂದ ಪ್ರಾರ್ಥನೆ, ಸಂಗೀತ ಜರುಗಿತು. ಎಂ.ಸಿ. ಐಲಿ ಸ್ವಾಗತಿಸಿದರು. ವ್ಹಿ.ಕೆ. ಗುರುಮಠ ನಿರೂಪಿಸಿ ವಂದಿಸಿದರು.

ನೇತೃತ್ವ ವಹಿಸಿದ್ದ ವೀರೇಶ್ವರ ಪುಣ್ಯಾಶ್ರಮದ ಪೂಜ್ಯ ಕಲ್ಲಯ್ಯಜ್ಜನವರು ಮಾತನಾಡಿ, ಗದಗ-ಬೆಟಗೇರಿಯ ಶ್ರೀ ಸಿದ್ಧಾಂತ ಶಿಖಾಮಣಿ ಆಧ್ಯಾತ್ಮಿಕ ಪ್ರವಚನ ಸಮಿತಿ ಪ್ರತಿ ವರ್ಷ ಕಾಶೀ ಜಗದ್ಗುರುಗಳಿಂದ ಆಷಾಢ ಮಾಸದ ಇಷ್ಟಲಿಂಗ ಮಹಾಪೂಜೆ ಹಾಗೂ ಶ್ರೀ ಸಿದ್ಧಾಂತ ಶಿಖಾಮಣಿ ಆಧ್ಯಾತ್ಮಿಕ ಪ್ರವಚನ ಕಾರ್ಯಕ್ರಮ ಏರ್ಪಡಿಸಿ ಗದಗ ಪರಿಸರದ ಜನರನ್ನು ಧರ್ಮದ ಸನ್ಮಾರ್ಗದಲ್ಲಿ ಮುನ್ನಡೆಯುವಂತೆ ಜಾಗೃತಗೊಳಿಸಿದ್ದಾರೆ.

ಪೂಜ್ಯರ ಪ್ರವಚನದಿಂದಾಗಿ ಧರ್ಮ ಜಾಗೃತಿ, ಜನ ಜಾಗೃತಿಯಾಗಿದೆ ಎಂದರು.

# ನಾಟಕ ಪ್ರದರ್ಶನ ಇಂದು

**■ ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ತೋಂಟದಾರ್ಯ ಕಲಾರಂಗದ ಸಹಯೋಗದಲ್ಲಿ ಜುಲೈ 4ರಂದು ಸಂಜೆ 6.30 ಗಂಟೆಗೆ ಗದುಗಿನ ತೋಂಟದಾರ್ಯ ಕಲ್ಯಾಣ ಮಂಟಪದಲ್ಲಿ ಧಾತ್ರಿ ರಂಗಸಂಸ್ಥೆ ಸಿರಿಗೇರಿ ಇವರು 'ಸೋರುತಿಹುದು ಸಂಬಂಧ' ಎಂಬ ನಾಟಕವನ್ನು ಪ್ರದರ್ಶಿಸಲಿದ್ದಾರೆ.



ಆಧುನಿಕತೆಯ ಭರದಲ್ಲಿ, ಹೆಣ್ಣು, ಹೊನ್ನು, ಮಣ್ಣಿನ ವ್ಯಾಮೋಹಗಳಿಗೆ ಒಳಗಾಗುವ ಮನುಷ್ಯ, ತನ್ನೊಳಗಿನ ಮನುಷ್ಯತ್ವವನ್ನು ಮರೆತು, ಸಂಬಂಧಗಳಿಗೆ ಸ್ಪಂದಿಸದೆ ತನ್ನ ಯಾಂತ್ರಿಕ ಬದುಕನ್ನು ಮುಂದುವರೆಸುತ್ತಿದ್ದಾನೆ. ಅಂತಹ ಮನುಷ್ಯನ ಸಂಬಂಧಗಳ ಕೊರತೆ ಮತ್ತು ನಿರೀಕ್ಷೆಗಳನ್ನು ನಾಟಕ ಎಳೆ ಎಳೆಯಾಗಿ ಬಿಚ್ಚಿಡುತ್ತದೆ.

ರಂಗಾಸಕ್ತರು, ಪರಿಷತ್ತಿನ ಸದಸ್ಯರು, ಕನ್ನಡಾಭಿಮಾನಿಗಳು ಆಗಮಿಸಬೇಕೆಂದು ಕಾರ್ಯದರ್ಶಿ ಕಿಶೋರಬಾಬು ನಾಗರಕಟ್ಟಿ, ದತ್ತಪ್ರಸನ್ನ ಪಾಟೀಲ ಹಾಗೂ ಡಿ.ಎಸ್. ಬಾಪುರಿ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

# ನಂದಿನಿ ಪಾರ್ಲರ್‌ಗೆ ನುಗ್ಗಿ ದಾಂಧಲೆ: ವಸ್ತುಗಳನ್ನು ಪುಡಿಗೈದ ನಿವೃತ್ತ ಡಿಜಿ ಓಂಪ್ರಕಾಶ್ ಪುತ್ರಿ!

**■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ನಿವೃತ್ತ ಡಿಜಿ ಓಂಪ್ರಕಾಶ್ ಪುತ್ರಿ ದಾಂಧಲೆ ನಡೆಸಿದ್ದು, ನಗರದ ನಂದಿನಿ ಪಾರ್ಲರ್ ಒಂದಕ್ಕೆ ನುಗ್ಗಿ ವಸ್ತುಗಳನ್ನು ಪೀಸ್ ಪೀಸ್ ಮಾಡಿದ್ದಾರೆ.

ಕೆಲವು ತಿಂಗಳ ಹಿಂದೆ ಪತ್ನಿಯಿಂದಲೇ ಬರ್ಬರವಾಗಿ ಹತ್ಯೆಯಾಗಿದ್ದ ನಿವೃತ್ತ ಡಿಜಿ ಓಂ ಪ್ರಕಾಶ್ ಅವರ ಪುತ್ರಿ ದಾಂಧಲೆ ಮಾಡಿಕೊಂಡಿದ್ದಾರೆ. ನಂದಿನಿ ಪಾರ್ಲರ್‌ಗೆ ನುಗ್ಗಿ ವಸ್ತುಗಳನ್ನು ಪೀಸ್ ಪೀಸ್ ಮಾಡಿದ್ದಾರೆ.

ಸಿಬ್ಬಂದಿಗೂ ಕೂಡ ಕೃತಿಕಾ ಥಳಿಸಿದ್ದಾರೆ. ಅವರ ವರ್ತನೆಗೆ ಸ್ಥಳೀಯರು ಶಾಕ್ ಆಗಿದ್ದಾರೆ. ನಿವೃತ್ತ ಡಿಜಿ ಓಂ ಪ್ರಕಾಶ್ ಕೊಲೆಯಾದ ನಂತರ ಸಹೋದರ ಬೇರೆ ಕಡೆಗೆ ಶಿಫ್ಟ್ ಆಗಿದ್ದಾರೆ. ಇಡೀ ಮನೆಯಲ್ಲಿ ಮಗಳು ಕೃತಿಕಾ ಒಂಟಿಯಾಗಿ ವಾಸವಾಗಿದ್ದಾರೆ.


ಕಳೆದ ಸೋಮವಾರ ಸಂಜೆ ಮನೆಯ ಪಕ್ಕದ ನಂದಿನಿ ಪಾರ್ಲರ್‌ಗೆ ಕೃತಿಕಾ ಬಂದಿದ್ದರು. ಅಂಗಡಿ ಮುಂದೆ ಸ್ವಲ್ಪ ಹೊತ್ತು ಹಾಗೇ ನಿಂತು ಅಲ್ಲಿನ ಮಾಲೀಕನನ್ನು ದಿಟ್ಟಿಸಿ ನೋಡಿದ್ರು.

ಇದನ್ನು ನೋಡಿದ ಮಾಲೀಕ, 'ಯಾಕೆ ಮೇಡಂ ಏನಾಯ್ತು' ಅಂತಾ ಕೇಳಿದ್ದ. ಈ ವೇಳೆ ಕೋಪಗೊಂಡ ಕೃತಿಕಾ ಏಕಾಏಕಿ ಅಂಗಡಿಗಳಲ್ಲಿದ್ದ ಎಲ್ಲಾ ವಸ್ತುಗಳನ್ನು ಹೊಡೆದು ಪೀಸ್ ಪೀಸ್ ಮಾಡಿದ್ದಾರೆ.

ಅಷ್ಟೇ ಅಲ್ಲದೇ, ತಡೆಯೋಕೆ ಬಂದ ಮಾಲೀಕನ ಮೇಲೆ ಹಲ್ಲೆ ಮಾಡಿ ಗಾಯಗೊಳಿಸಿದ್ದಾರೆ.

\ಆಕೆಯ ವರ್ತನೆಯಿಂದ ಭಯಗೊಂಡ ಸ್ಥಳೀಯರು ಪೊಲೀಸರಿಗೆ ತಿಳಿಸಿದ್ದಾರೆ. ಸ್ಥಳಕ್ಕೆ ಬಂದ ಪೊಲೀಸರನ್ನು ನೋಡಿ ಏನೂ ಆಗೇ ಇಲ್ಲ ಎಂಬಂತೆ ಕೃತಿಕಾ ಮನೆಗೆ ಹೋಗಿದ್ದಾರೆ. ಪ್ರಕರಣ ದಾಖಲಾಗಿರುವ ಬಗ್ಗೆ ಯಾವುದೇ ಮಾಹಿತಿ ಲಭ್ಯವಾಗಿಲ್ಲ.

# ನಗರೇಶ್ವರ ದೇವಸ್ಥಾನದ ವಾರ್ಷಿಕೋತ್ಸವ



**■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಪಟ್ಟಣದ ಶ್ರೀ ನಗರೇಶ್ವರ ದೇವಸ್ಥಾನದ ವಾರ್ಷಿಕೋತ್ಸವವನ್ನು ಇಲ್ಲಿನ ಆರ್ಯವೈಶ್ಯ ಸಮಾಜದವರು ಶ್ರದ್ಧಾಭಕ್ತಿಯಿಂದ ಆಚರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಮಾಜದ ಅಧ್ಯಕ್ಷ ರಾಮಣ್ಣ ನವಲಿ, ಸಮಾಜದ ಎಲ್ಲ ಬಂಧುಗಳ ಸಹಕಾರದಿಂದ ನರೇಗಲ್ಲ ಪಟ್ಟಣದಲ್ಲಿ ಒಂದು ವರ್ಷದ ಕೆಳಗೆ ನಾವು ಈ ಭವ್ಯ ದೇವಸ್ಥಾನವನ್ನು ನಿರ್ಮಿಸಿದೆವು. ಈ ಕಾರ್ಯದಲ್ಲಿ ಕೇವಲ ನಮ್ಮೂರಿನ ಸಮಾಜ ಬಾಂಧವರಲ್ಲದೆ, ಪರ ಊರಿನ ಎಲ್ಲ ಬಾಂಧವರು ಮತ್ತು ನಮ್ಮೂರಿನ ಇತರೆ ಸಮಾಜದ ಎಲ್ಲ ಬಂಧುಗಳು ಸಾಕಷ್ಟು ಸಹಕಾರ ನೀಡಿದರು ಎಂದರು.

ಉಪಾಧ್ಯಕ್ಷ ಚಂದ್ರಹಾಸ ಇಲ್ಲೂರ ಮಾತನಾಡಿ, ಈ ಒಂದು ವರ್ಷದ ಅವಧಿಯಲ್ಲಿ ಈ ದೇವಸ್ಥಾನದಲ್ಲಿ ಅನೇಕ ಧಾರ್ಮಿಕ ಕಾರ್ಯಗಳು ನಡೆದಿವೆ. ನಮ್ಮ ಸಮಾಜದ ಸುಮಂಗಲೆಯರು ಎಲ್ಲ ಹಬ್ಬ ಹರಿದಿನಗಳಲ್ಲಿ ಇಲ್ಲಿ ಸೇರಿ ಉಡಿ ತುಂಬುವ, ಲಕ್ಷ್ಮೀ ಸೋಬಾನೆ, ಕುಂಕುಮಾರ್ಚನೆ ಇತ್ಯಾದಿ ಕಾರ್ಯಕ್ರಮಗಳನ್ನು ಅತ್ಯಂತ ಶ್ರದ್ಧಾಭಕ್ತಿಗಳಿಂದ ಮಾಡುತ್ತ ಬಂದಿದ್ದಾರೆ. ಈ ಕಾರ್ಯಗಳು ಹೀಗೆಯೇ ಮುನ್ನಡೆಯಲಿ ಎಂದು ಆಶಿಸಿದರು.

ವೇ. ಮೂ. ವಿಶ್ವನಾಥಭಟ್ಟ ಗ್ರಾಮಪುರೋಹಿತರ ನೇತೃತ್ವದಲ್ಲಿ ಧಾರ್ಮಿಕ ಕಾರ್ಯಗಳು ನಡೆದವು. ಶ್ರೀ ಕನ್ನಿಕಾ ಪರಮೇಶ್ವರಿಗೆ ಪಾಲಕೀ ಸೇವೆ ಜರುಗಿತು. ಅಶೋಕ ನವಲಿ, ರಾಜೇಂದ್ರ ದೇವರಂಗಡಿ, ಚಂದ್ರಹಾಸ ಇಂಗಳಳ್ಳಿ, ವೆಂಕಟೇಶ ಕಣವಿಹಳ್ಳಿ, ಈರಣ್ಣ ಇಲ್ಲೂರ, ಮುತ್ತಣ್ಣ ದೇವರಂಗಡಿ, ಶರಣಪ್ಪ ಬಿಜಾಪೂರ, ಬೆಟದೂರ ಸಹೋದರರು, ಮನೋಹರ ಗುಡಿಸಾಗರ, ನಾಗೇಶ ಗುಡಿಸಾಗರ, ಮಂಜುನಾಥ ನವಲಿ, ಮಹೇಶ ನವಲಿ ಹಾಗೂ ಸಮಾಜದ ಎಲ್ಲ ಸುಮಂಗಲೆಯರು ಪಾಲ್ಗೊಂಡಿದ್ದರು.

# ಭರದಿಂದ ಸಾಗಿದ ಸ್ವಚ್ಛತಾ ಕಾರ್ಯ

**■ ವಿಜಯಸಾಕ್ಷಿ ಸುದ್ದಿ, ರೋಣ**

ಮಾರನಬಸರಿ ಗ್ರಾಮದಲ್ಲಿ ಜರುಗುವ ಮೊಹರಂ ಹಬ್ಬಕ್ಕೆ ಸಾವಿರಾರು ಭಕ್ತರು ಆಗಮಿಸುವ ಹಿನ್ನೆಲೆಯಲ್ಲಿ ಗ್ರಾಮ ಪಂಚಾಯಿತಿ ವತಿಯಿಂದ ಸ್ವಚ್ಛತಾ ಕಾರ್ಯ ಕೈಗೊಳ್ಳಲಾಗುತ್ತಿದೆ.



ಗ್ರಾಮದಲ್ಲಿ ನಡೆಯುವ ಮೊಹರಂ ಹಬ್ಬಕ್ಕೆ ಆಗಮಿಸುವ ಭಕ್ತರ ಸಂಖ್ಯೆ ವರ್ಷದಿಂದ ವರ್ಷಕ್ಕೆ ಹೆಚ್ಚಳವಾಗುತ್ತಿದೆ. ಆಗಮಿಸಿದ ಭಕ್ತರಿಗೆ ತೊಂದರೆಯಾಗಬಾರದು ಎಂಬ ದೃಷ್ಟಿಯಿಂದ ಗ್ರಾ.ಪಂ ಆಡಳಿತ ಮಂಡಳಿಯವರು ಗ್ರಾಮದ ಸ್ವಚ್ಛತೆಗೆ ಮೊದಲ ಆದ್ಯತೆ ನೀಡುತ್ತಿದ್ದಾರೆ.

ಗ್ರಾಮದಲ್ಲಿರುವ ಚರಂಡಿಗಳನ್ನು ಶುಚಿಗೊಳಿಸಿ ಚರಂಡಿ ನೀರನ್ನು ಹೊರವಲಯದಲ್ಲಿರುವ ಹಳ್ಳಕ್ಕೆ ಸೇರುವಂತೆ ಶ್ರಮವಹಿಸಿದ್ದು, ಗ್ರಾಮಸ್ಥರ ಮೆಚ್ಚುಗೆಗೆ ಕಾರಣವಾಗಿದೆ. ಕುಡಿಯುವ ನೀರಿನ ತೊಂದರೆ-ಯಾಗದಂತೆ ನಿಗಾ ವಹಿಸಿದ್ದು, ನೀರು ಸಂಗ್ರಹ ಘಟಕಗಳನ್ನು ಶುಚಿಗೊಳಿಸಲಾಗಿದೆ. ಪಂಚಾಯಿತಿ ಸಿಬ್ಬಂದಿಗಳು ಇಡೀ ದಿನ ಕರ್ತವ್ಯದಲ್ಲಿ ತೊಡಗಿಕೊಂಡಿದ್ದು, ಪಿಡಿಒ ವಾರದಿಂದ ಗ್ರಾಮದಲ್ಲಿ ಬಿಡಾರ ಹೂಡಿ ಹಬ್ಬದ ಯಶಸ್ವಿಗೆ ಕೈಜೋಡಿಸಿದ್ದಾರೆ. ಗ್ರಾ.ಪಂ ಅಧ್ಯಕ್ಷ ವೀರಣ್ಣ ಮರಡಿ, ಉಪಾಧ್ಯಕ್ಷೆ ಮಂಜುಳಾ ಮಾದರ, ಸದಸ್ಯರಾದ ಈರಪ್ಪ ನಿಡಗುಂದಿ, ಶಿವಕುಮಾರ ದಿಂಡೂರ, ಅಲ್ಲಾಸಾಬ ಮೋತೆಖಾನ್, ದಿಲ್‌ಶ್ಯಾದಬೇಗಂ ದೋಟಿಹಾಳ, ಫಾತಿಮಾ ಸವಡಿ, ಹನಮವ್ವ ತಳವಾರ, ಪಿಡಿಒ ಎಸ್. ಆರ್. ಸಂಕನೂರ ಸೇರಿದಂತೆ ಗ್ರಾ.ಪಂ ಸಿಬ್ಬಂದಿಗಳು ಸ್ವಚ್ಛತಾ ಕಾರ್ಯದಲ್ಲಿ ನಿರ್ದೇಶನ ನೀಡುತ್ತಿದ್ದಾರೆ.

# ಬಾಲಾಜಿಗೆ ಪಿಎಚ್. ಡಿ ಪದವಿ

**■ ವಿಜಯಸಾಕ್ಷಿ ಸುದ್ದಿ, ಕೊಪ್ಪಳ**




ಇಲ್ಲಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ನಿರ್ವಹಣಾ ಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕ ಬಾಲಾಜಿ ಎಸ್ ಅವರು ಮಂಡಿಸಿದ " ಕಾರ್ಪೊರೇಟ್ **ಸೋಷಿಯಲ್ ರೆಸ್ಪಾನ್ಸಿಬಿಲಿಟಿ ಆನ್ ರೂರಲ್ ಡೆವಲಪ್ಮೆಂಟ್:** ಸೆಲೆಕ್ಟೆಡ್ ಕಂಪನೀಸ್ ಫ್ರಮ್ ಕಲ್ಯಾಣ ಕರ್ನಾಟಕ ರೀಜನ್ ಆಫ್ ಕರ್ನಾಟಕ " ಮಹಾಪ್ರಬಂಧಕ್ಕೆ ಮೈಸೂರಿನ ಕೆಎಸ್‌ಒಯು ವಿಶ್ವವಿದ್ಯಾಲಯ ಪಿಹೆಚ್.ಡಿ ಪದವಿ ಪ್ರದಾನ ಮಾಡಿದೆ. ಪ್ರಾಧ್ಯಾಪಕ ಸಿ.ಮಹದೇವಮೂರ್ತಿ ಮಾರ್ಗದರ್ಶನ ಮಾಡಿದ್ದಾರೆ.

ಕೊಪ್ಪಳದ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಬೋಧಕ-ಬೋಧಕೇತರ ಸಿಬ್ಬಂದಿ ಹರ್ಷ ವ್ಯಕ್ತಪಡಿಸಿದ್ದಾರೆ.

# ಭಕ್ತರನ್ನು ಸೆಳೆಯುತ್ತಿರುವ ಮಾರನಬಸರಿ ಮೊಹರಂ

**■ ವಿಜಯಸಾಕ್ಷಿ ಸುದ್ದಿ, ರೋಣ**

ಮೊಹರಂ ಹಬ್ಬದಲ್ಲಿ ಮಹತ್ವದ ದಿನಗಳೆಂದು ಪರಿಗಣಿಸುವ ಸಂದಲ್ ರಾತ್ರಿ, ಕತ್ತಲ್ ರಾತ್ರಿ ಹಾಗೂ ದೇವರು ಹೊಳೆಗೆ ಹೋಗುವ ದಿನಗಳಂದು ಮಾರನಬಸರಿ ಗ್ರಾಮಕ್ಕೆ ಸಾವಿರಾರು ಭಕ್ತರು ಆಗಮಿಸಿ ಅಲೈದೇವರುಗಳ ದರ್ಶನ ಪಡೆಯುತ್ತಾರೆ.




ಗದಗ ಜಿಲ್ಲೆಯಲ್ಲಿ ಅತ್ಯಂತ ಸಂಭ್ರಮ ಮತ್ತು ಭಕ್ತಿಯಿಂದ ನಡೆಯುವ ಹಬ್ಬ ಮಾರನಬಸರಿ ಗ್ರಾಮದ ಮೊಹರಂ ಆಗಿದೆ. ಧರ್ಮ-ಜಾತಿಗಳ ಜಂಜಾಟಗಳಿಲ್ಲದೆ ಎಲ್ಲರೂ ಸೇರಿ ಆಚರಿಸುವ ಹಬ್ಬ ಇದಾಗಿದ್ದು, ಗ್ರಾಮದ ಮೊಹರಂ ಹಬ್ಬವನ್ನು ವೀಕ್ಷಿಸಲು ಜಿಲ್ಲೆಯ ಅನೇಕ ಗ್ರಾಮಗಳಿಂದ ಸಾವಿರಾರು ಭಕ್ತರು ಗ್ರಾಮಕ್ಕೆ ಆಗಮಿಸುತ್ತಾರೆ. ಹಬ್ಬದ ನಿಮಿತ್ತ ಗ್ರಾಮ ಬಗೆ ಬಗೆಯಲ್ಲಿ ಅಲಂಕೃತಗೊಂಡ ಝಗಮಗಿಸುವ ವಿದ್ಯುತ್ ದೀಪಾಲಂಕಾರಗಳಿಂದ ಕಂಗೊಳಿಸುತ್ತಿದೆ.

ಜುಲೈ 4ರಂದು ಸಂಧಲ್ ರಾತ್ರಿಯಿದ್ದು, ಈ ದಿನದಂದು ದೊಡ್ಡ ಮಸೂತಿಯ ದೊಡ್ಡ ದೇವರ ಸವಾರಿ ಮಧ್ಯರಾತ್ರಿ ಹೊರಡುತ್ತದೆ. ದೊಡ್ಡ ದೇವರ ಸವಾರಿ ವೀಕ್ಷಿಸಲು ಸಾವಿರಾರು ಭಕ್ತರು ನೆರೆಯುತ್ತಾರೆ. ಜುಲೈ 5ರಂದು ಕತ್ತಲ್ ರಾತ್ರಿ ದಿನದಂದು ಸಾಕಷ್ಟು ಸಂಖ್ಯೆಯಲ್ಲಿ ಭಕ್ತರು ಸೇರುತ್ತಾರೆ. ಎರಡು ಮಸೂತಿಗಳ ಎಲ್ಲ ದೇವರುಗಳ ಸವಾರಿ ನಡೆಯುತ್ತದೆ. ಜುಲೈ 6ರಂದು ಅಲೈ ದೇವರುಗಳು ಹೊಳೆಗೆ ಹೊಗುವ ದಿನವಾಗಿದ್ದು, ಮದ್ಯಾಹ್ನ 3 ಗಂಟೆಯ ಸುಮಾರಿಗೆ ದೇವರುಗಳ ಸವಾರಿ ನಡೆಯುತ್ತದೆ.

**ಸಿದ್ಧಲಿಂಗ ನಗರದ ಸರಕಾರಿ ಪ್ರೌಢಶಾಲೆಯಲ್ಲಿ ಕರಪತ್ರ ಬಿಡುಗಡೆ**

# ಅತಿಯಾದ ಮೊಬೈಲ್ ಬಳಕೆ ತಪ್ಪಿಸಿ




**■ ವಿಜಯಸಾಕ್ಷಿ ಸುದ್ದಿ, ಗದಗ**

ನಿರಂತರ ಪುಸ್ತಕ ಓದುವುದರಿಂದ ವಿದ್ಯಾರ್ಥಿಗಳು ಭವಿಷ್ಯದಲ್ಲಿ ಉತ್ತಮ ಬದುಕು ಕಟ್ಟಿಕೊಳ್ಳಬಹುದು. ಅತಿಯಾದ ಮೊಬೈಲ್ ದುರ್ಬಳಕೆಯಿಂದ ಬದುಕು ಬೀದಿಗೆ ಬೀಳುವುದು ನಿಶ್ಚಿತ. ಇದನ್ನರಿತು ವಿದ್ಯಾರ್ಥಿಗಳು ಎಚ್ಚರಿಕೆಯ ಹೆಜ್ಜೆಯನ್ನು ಇಡುವುದು ಇಂದು ಅತ್ಯವಶ್ಯವಿದೆ ಎಂದು ಹಿರಿಯ ಶಿಕ್ಷಕ ಎಂ.ಐ. ಶಿವನಗೌಡ್ರ ಅಭಿಪ್ರಾಯಪಟ್ಟರು.

ಸಿದ್ಧಲಿಂಗ ನಗರದ ಸರಕಾರಿ ಪ್ರೌಢಶಾಲೆಯಲ್ಲಿ ಪುಸ್ತಕದ ಮಹತ್ವ ಹಾಗೂ ಮೊಬೈಲ್ ಬಳಕೆ ಮತ್ತು ದುರ್ಬಳಕೆಯ ಬಗ್ಗೆ ಹೊರತಂದ ಕರಪತ್ರ ಬಿಡುಗಡೆ ಕಾರ್ಯಕ್ರಮದಲ್ಲಿ ಅವರು ಮಾತನಾಡುತ್ತಿದ್ದರು.

ಪುಸ್ತಕದೊಂದಿಗೆ ನಿರಂತರ ತಮ್ಮ ಸ್ನೇಹ ಇರಲಿ. ಓದುವ ಹವ್ಯಾಸ ರೂಢಿ ಮಾಡಿಕೊಳ್ಳಿ. ಪುಸ್ತಕ ಹೇಳುತ್ತದೆ-ತಲೆ ತಗ್ಗಿಸಿ ನನ್ನನ್ನು ನೋಡು, ನಾನು ಸದಾ ತಲೆ ಎತ್ತುವಂತೆ ಮಾಡುತ್ತೇನೆ. ಮೊಬೈಲ್ ಹೇಳುತ್ತದೆ-ತಲೆ ತಗ್ಗಿಸಿ ನನ್ನನ್ನು ಒಮ್ಮೆ ನೋಡು, ಮತ್ಯಾವತ್ತೂ ನಿನ್ನನ್ನು ತಲೆ ಎತ್ತದಂತೆ ಮಾಡುತ್ತೇನೆ. ಇಂತಹ ಸಂದೇಶವುಳ್ಳ ಕಿರುಪತ್ರವನ್ನು ಇಂದು ಶಾಲೆಯಲ್ಲಿ ಪ್ರತಿ ಕೋಣೆಗೆ ಅಂಟಿಸಲಾಗಿದೆ. ದಿನಕ್ಕೆ ಒಂದು ಬಾರಿಯಾದರೂ ಈ ಸಂದೇಶವನ್ನು ಮೆಲುಕು ಹಾಕಿದರೆ ನಿಮ್ಮ ಜೀವನ ಯಶಸ್ವಿಯಾಗುತ್ತದೆ ಎಂದರು. ಈ ಸಂದರ್ಭದಲ್ಲಿ ಶಂಕ್ರಮ್ಮ ಆರ್.ಹಣಮಗೌಡ್ರು, ಮಂಜುಳಾ ಪಿ.ಸಾಮ್ರಾಣಿ, ಸುಮಂಗಲ ಎಂ.ಪತ್ತಾರ್, ಶಾರದಾ ಬಾಣದ, ಶೋಭಾ ಎಸ್.ಗಾಳಿ, ರಮೇಶ್ ಬಸರಿ, ಸಾವಿತ್ರಿ ಎ.ಗದ್ದನಕೇರಿ, ಎನ್.ಆರ್. ಶಿರೋಳ್, ಸಬಿಯಾ ಯು.ಕುಷ್ಟಗಿ, ಗಂಗಾ ಎಂ.ಅಳವಂಡಿ, ಮಂಜುಳಾ ಟಿ, ಶಶಿಕಲಾ ಬಿ.ಗುಳೇದವರ, ಪದ್ಮಾ ವಿ.ದಾಸರ್, ಲಕ್ಷ್ಮಮ್ಮ ಮಾಳೋತ್ತರ್, ಶಾರದಾ ಬಾಣದ ಮುಂತಾದವರು ಉಪಸ್ಥಿತರಿದ್ದರು. ಸಂಜೀವಿನಿ ಕೂಲಗುಡಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

ಅಧ್ಯಕ್ಷತೆ ವಹಿಸಿದ್ದ ಪ್ರಭಾರಿ ಮುಖ್ಯೋಪಾಧ್ಯಾಯರಾದ ಜಯಲಕ್ಷ್ಮೀ ಅಣ್ಣಿಗೇರಿ ಮಾತನಾಡಿ, ವಿದ್ಯಾರ್ಥಿ ಜೀವನವೆಂದರೆ ಸುವರ್ಣಕಾಲ. ಇದರ ಸದುಪಯೋಗವನ್ನು ಮಾಡಿಕೊಂಡು ಬಂಗಾರದಂತಹ ಬದುಕನ್ನು ಕಟ್ಟಿಕೊಳ್ಳಲು ಇದು ಅತ್ಯಂತ ಮಹತ್ವದ ಕಾಲಘಟ್ಟ. ಈ ಶಾಲೆಯಲ್ಲಿ ನಿಮಗೆ ಉತ್ತಮ ಶೈಕ್ಷಣಿಕ ವಾತಾವರಣನ್ನು ಕಲ್ಪಿಸಲಾಗಿದೆ. ಈ ಕರಪತ್ರಗಳು ತಮ್ಮ ಬದುಕಿನ ಪಥವನ್ನು ಬದಲಿಸಲಿ ಎಂದು ಹೇಳಿದರು.

# ಕಮ್ಯುನಿಟಿ ಮೊಬೈಲೈಜರ್ ಹುದ್ದೆಗೆ ಅರ್ಜಿ ಆಹ್ವಾನ

**■ ವಿಜಯಸಾಕ್ಷಿ ಸುದ್ದಿ, ಗದಗ**

ರೋಣ ಪುರಸಭೆ ವ್ಯಾಪ್ತಿಯಲ್ಲಿ ಸ್ವಚ್ಛ ಭಾರತ್ ಮಿಷನ್-2.0ರ ಅಡಿಯಲ್ಲಿ ಐಇಸಿ ಮಾಹಿತಿ, ಶಿಕ್ಷಣ ಮತ್ತು ಸಂವಹನ ಘಟಕದಡಿಯಲ್ಲಿ ಘನ ಮತ್ತು ದ್ರವ ನಿರ್ವಹಣೆಯ ಕುರಿತು ನಗರ/ಸ್ಥಳೀಯ ಮಟ್ಟದಲ್ಲಿ ವಿವಿಧ ಬಗೆಯ ಚಟುವಟಿಕೆಗಳನ್ನು ಕೈಗೊಳ್ಳಲು ನಲ್ಮ್‌ಡೇ ಯೋಜನೆಯ ಸ್ವ-ಸಹಾಯ ಸದಸ್ಯರುಗಳನ್ನು ಕಮ್ಯುನಿಟಿ ಮೊಬೈಲೈಜರ್ ಹುದ್ದೆಗೆ ಮಾಸಿಕ ಗೌರವಧನ ಆಧಾರದ ಮೇಲೆ ತಾತ್ಕಾಲಿಕ ಸೇವೆ ಪಡೆದುಕೊಳ್ಳಲು ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಅಭ್ಯರ್ಥಿಗಳು ಎಲ್ಲ ಅಗತ್ಯ ದಾಖಲಾತಿಗಳೊಂದಿಗೆ ಜುಲೈ 8ರ ಸಂಜೆ 5 ಗಂಟೆಯೊಳಗಾಗಿ ನಿಗದಿತ ಅರ್ಜಿ ನಮೂನೆ ಪಡೆದು ಮಾಹಿತಿಯನ್ನು ಭರ್ತಿ ಮಾಡಿ, ಖುದ್ದಾಗಿ ಮುಖ್ಯಾಧಿಕಾರಿಗಳು, ಪುರಸಭೆ ರೋಣ ವಿಳಾಸಕ್ಕೆ ದ್ವಿಪ್ರತಿಯಲ್ಲಿ ಸಲ್ಲಿಸತಕ್ಕದ್ದು. ಹೆಚ್ಚಿನ ಮಾಹಿತಿಗಾಗಿ ರೋಣ ಪುರಸಭೆಯ ಆರೋಗ್ಯ ಶಾಖೆಯನ್ನು ಸಂಪರ್ಕಿಸಬಹುದಾಗಿದೆ.

ಕರ್ನಾಟಕ ಸರಕಾರ
**ಕೆ.ಎಚ್.ಪಾಟೀಲ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಗದಗ**
ದೂರವಾಣಿ / ಫ್ಯಾಕ್ಸ್ ಸಂಖ್ಯೆ : 08372-297213,
ಇ-ಮೇಲ್ : gimsgadag@gmail.com
ಸಂ. ಕೆಎಚ್‌ಪಿವೈವಿಸಂ/ಟೆಂಡರ/ಕ್ಯಾತ್ ಲ್ಯಾಬ್/ಪರಿಕರ/2025-26
ದಿನಾಂಕ : 03.07.2025

**ಇ-ಟೆಂಡರ ಪ್ರಕಟಣೆ**

ಕೆ.ಎಚ್.ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೋಧಕ ಆಸ್ಪತ್ರೆ ಗದಗ ಇಲ್ಲಿಗೆ Cathlab ಗೆ ಸಂಬಂಧಿಸಿದ ವಿವಿಧ ಪರಿಕರಗಳ (Consumables) ಸರಬರಾಜಿಗಾಗಿ ಆಸಕ್ತಿಯುಳ್ಳ ತಯಾರಕರಿಂದ, ಅಧಿಕೃತ ಮಾರಾಟಗಾರರಿಂದ ಹಾಗೂ ಸಂಘ ಸಂಸ್ಥೆಗಳಿಂದ ದ್ವಿ-ಲಕೋಟೆ ಪದ್ಧತಿಯಲ್ಲಿ ಇ-ಪ್ರೋಕ್ಯೂರ್‌ಮೆಂಟ್ ಮೂಲಕ ಟೆಂಡರನ್ನು ದಿನಾಂಕ : **04.07.2025** ರಿಂದ ದಿನಾಂಕ : **19.07.2025**ರ ಸಾಯಂಕಾಲ 4:30 ಗಂಟೆವರೆಗೆ ಇ-ಪೋರ್ಟಾಲ್ ಸಂಖ್ಯೆ: DME/2025-26/IND1546 (https://kppp.karnataka.gov.in/) ನಲ್ಲಿ ಟೆಂಡರ ಅಪ್‌ಲೋಡ್ ಮಾಡಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಕರ್ತವ್ಯದ ದಿನಗಳಲ್ಲಿ ಕೆಳಗಡೆ ಸಹಿ ಮಾಡಿದವರ ಕಛೇರಿಗೆ ಸಂಪರ್ಕಿಸಬಹುದು.

**ಸಹಿ/- ನಿರ್ದೇಶಕರು,**
**ಕೆ.ಎಚ್.ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಗದಗ**
ವಾಸಾಸಂಇ/ಗದಗ/ಕೆಎಸ್‌ಎಂಸಿಎ/151/2025-26

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka